# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 26 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 29–07–2023 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 26 Title- Code: KARKAN 28269 Chitradurga Date: 29-07-2023 Saturday Page: 4 Price: Rs. 2-00



**ಒಳಪುಟದ ಸುದ್ದಿಗಳು**

ವಿಡಿಯೋ ಚಿತ್ರೀಕರಣ ವಿರುದ್ಧ ಮಹಿಳಾ ಬಿಜೆಪಿ ಪ್ರತಿಭಟನೆ 2

ಸಂಚಾರಿ ನಿಯಮ ಪಾಲಿಸದಿದ್ದರೆ, ಕೇಸ್ ದಾಖಲು: ಪಿಎಸ್ಐ ಭೀಮನಗೌಡ ಪಾಟೀಲ 3

ಪೀರಲ ದೇವರ ದೇವಸ್ಥಾನದಲ್ಲಿ ಮೊಹರಂ ಹಬ್ಬಕ್ಕೆ ಸಡಗರದ ಸಿದ್ಧತೆ 4


**ಫಾಸ್ಟ್ ನ್ಯೂಸ್**

## ಆಗಸ್ಟ್ 2ರಂದು ರಾಜ್ಯ ನಾಯಕರೊಂದಿಗೆ ಕೈ ಹೈಕಮಾಂಡ್ ಸಭೆ

» **ನವದೆಹಲಿ**

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಸ್ವಪಕ್ಷದ ಶಾಸಕರ ಮುನಿಸಿನ ಬೆನ್ನಲ್ಲೇ, ಪಕ್ಷದ ಹಿರಿಯ ನಾಯಕರ ಜತೆಗೆ ಆಗಸ್ಟ್ 2ರಂದು ನವದೆಹಲಿಯಲ್ಲಿ ಸಭೆ ನಡೆಸಲು ಹೈಕಮಾಂಡ್ ತೀರ್ಮಾನಿಸಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಮಧ್ಯಾಹ್ನ 2 ಗಂಟೆಗೆ ಸಭೆ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ರಾಜ್ಯದ ಹಿರಿಯ ನಾಯಕರು ಪಾಲ್ಗೊಳ್ಳಲಿದ್ದಾರೆ. ಸಚಿವ ಸ್ಥಾನ ಸಿಗದ ಕಾರಣಕ್ಕೆ ಮುನಿಸಿಕೊಂಡಿರುವ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಅವರಿಗೆ ಸಭೆಗೆ ಆಹ್ವಾನ ನೀಡಲಾಗಿದೆ. ಸಚಿವ ಸಂಪುಟದ ಎಲ್ಲ ಸದಸ್ಯರು ಸಭೆಯಲ್ಲಿ ಭಾಗಿಯಾಗುವ ಸಾಧ್ಯತೆ ಇದೆ. ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಹಾಗೂ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಸಹ ಭಾಗವಹಿಸಲಿದ್ದಾರೆ. ತಾವು ಮಾಡಿರುವ ವರ್ಗಾವಣೆ ಶಿಫಾರಸುಗಳಿಗೆ ಸಚಿವರು ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ 30ಕ್ಕೂ ಹೆಚ್ಚು ಶಾಸಕರು ಮುಖ್ಯಮಂತ್ರಿ ಅವರಿಗೆ ಜುಲೈ 24ರಂದು ಪತ್ರ ಬರೆದಿದ್ದರು. ಎಲ್ಲ ಸಚಿವರ ಜತೆಗೆ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರ ಸಭೆ ಜೂನ್ ತಿಂಗಳಲ್ಲಿ ನಿಗದಿಯಾಗಿತ್ತು. ಆದರೆ, ಕೊನೆಯ ಕ್ಷಣದಲ್ಲಿ ಈ ಸಭೆ ರದ್ದಾಗಿತ್ತು.

## ರೈತರ ಕಷ್ಟವನ್ನು ಅರಿತು ಹಾಲಿನ ಬೆಲೆ ಏರಿಕೆ: ಡಿಸಿಎಂ ಡಿಕೆಶಿ

» **ಬೆಂಗಳೂರು**

ರೈತರ ಕಷ್ಟ ಕಾರ್ಪಣ್ಯಗಳನ್ನು ಮನಗಂಡು ಆ ದೃಷ್ಟಿಯಿಂದ ಹಾಲಿನ ಬೆಲೆ ಏರಿಕೆ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ನಂದಿನ ಹಾಲಿನ ದರ ಏರಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ನಾನು ಮೂಲತಃ ಒಬ್ಬ ರೈತನಾಗಿ ನನಗೆ ಹೈನುಗಾರಿಕೆ ರೈತರ ಕಷ್ಟಗಳು ಅರ್ಥವಾಗುತ್ತಿದೆ. ಹಾಲಿನ ಬೆಲೆಯನ್ನು ಲೀಟರ್ ಗೆ 5 ರೂಪಾಯಿ ಏರಿಕೆ ಮಾಡಬೇಕೆಂದು ಬೇಡಿಕೆ ಬಂದಿತ್ತು. ಕೊನೆಗೆ ಮುಖ್ಯಮಂತ್ರಿಗಳು ಮಾತುಕತೆ ನಡೆಸಿ 3 ರೂಪಾಯಿ ಏರಿಕೆ ಮಾಡಲು ನಿರ್ಧಾರ ಕೈಗೊಂಡರು. ಈ ಏರಿಕೆ ಹಣ ನಿಜವಾಗಿಯೂ ರೈತರಿಗೆ ತಲುಪಬೇಕು ಎಂದರು. 3 ರೂಪಾಯಿ ಹೆಚ್ಚಳ ಮಾಡಿದರೆ ಯಾರಿಗೂ ಏನೂ ಸಮಸ್ಯೆಯಾಗುವುದಿಲ್ಲ. ಬಿಜೆಪಿಯವರು ರಾಜಕೀಯದ ಹೇಳಿಕೆ ನೀಡುತ್ತಿದ್ದಾರೆ. ಅವರು ಇರೋದೆ ಟೀಕೆ ಮಾಡಲು ಎಂದರು. ಇಡೀ ದೇಶದಲ್ಲಿ ನಮ್ಮ ರಾಜ್ಯದಲ್ಲಿ ಮಾತ್ರ ರೈತರು ಹಾಲಿಗೆ ಇಷ್ಟೊಂದು ಕಡಿಮೆ ಹಣ ಪಡೆಯುತ್ತಿದ್ದಾರೆ. ಬೇರೆ ರಾಜ್ಯಗಳಲ್ಲಿ ಹಾಲಿಗೆ ಇದಕ್ಕಿಂತ ದರ ಅಧಿಕವಾಗಿದೆ. 3 ರೂಪಾಯಿ ನೇರವಾಗಿ ರೈತರಿಗೆ ಹೋಗುತ್ತದೆ. ರೈತರಿಗೆ ಸಹಾಯ ಮಾಡಬೇಕೆಂಬುದೇ ನಮ್ಮ ಉದ್ದೇಶ ಎಂದರು.

# ಶಂಕಿತ ಉಗ್ರರರಿಗೆ ಗನ್ ಸರಬರಾಜು ಮಾಡಿದ್ದು ಬೆಳಕಿಗೆ

» **ಬೆಂಗಳೂರು**

ನಗರ ಸೇರಿದಂತೆ ರಾಜ್ಯಾದ್ಯಂತ ವಿಧ್ವಂಸಕ ಕೃತ್ಯಗಳಿಗೆ ಸಂಚು ರೂಪಿಸಿ ಸಿಕ್ಕಿಬಿದ್ದಿರುವ ಶಂಕಿತ ಉಗ್ರರ ಬಂಧನ ಪ್ರಕರಣದ ತನಿಖೆಯನ್ನು ತೀವ್ರ ಗೊಳಿಸಿರುವ ಸಿಸಿಬಿ ಅಧಿಕಾರಿಗಳು ಶಂಕಿತ ಉಗ್ರರರಿಗೆ ಗನ್ ಸರಬರಾಜು ಮಾಡಿದ ಖದೀಮ ನನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.



ಶಂಕಿತ ಉಗ್ರ ಜುನೈದ್ ಅಣತಿಯಂತೆ ರಬ್ಬಾನಿಗೆ ಗನ್ ಸರಬರಾಜು ಮಾಡಿರುವ ಖದೀಮನ ಹೆಸರು ಇನ್ನಿತರ ಮಾಹಿತಿಯು ತನಿಖೆಯಲ್ಲಿ ಪತ್ತೆಯಾಗಿದ್ದು ಆತನ ಬಂಧನಕ್ಕೆ ತೀವ್ರ ಶೋಧ ನಡೆಸಲಾಗಿದೆ.ಸಲ್ಮಾನ್ ಎನ್ನುವ ಶಂಕಿತನಿಂದ ಶಂಕಿತ ಉಗ್ರರಿಗೆ ಗನ್ ಸರಬರಾಜು ಮಾಡಲಾಗಿದ್ದು ಇದನ್ನು ಜೈಲಿನಿಂದ ಪೊಲೀಸರ ಕಸ್ಟಡಿಗೆ ತೆಗೆದುಕೊಂಡಿರುವ ಟಿ.ನಾಸೀರ್ ಬಾಯ್ಬಿಟ್ಟಿದ್ದು, ಹಿಂದೆ ಸಲ್ಮಾನ್ ಪೋಕ್ಸೊ ಕೇಸಲ್ಲಿ ಜೈಲು ಸೇರಿದ್ದನು.ನೇಪಾಳ ಮೂಲಕ ಸಲ್ಮಾನ್ ಕೂಡ ದೇಶ ಬಿಟ್ಟು ಪರಾರಿಯಾಗಿರುವ ಶಂಕೆ ವ್ಯಕ್ತವಾಗಿದ್ದು ಆತನ ಪಾಸ್‌ಪೋರ್ಟ್, ಫೋನ್ ಕರೆಗಳ ವಿವರ ಪಡೆದ ಸಿಸಿಬಿ ಅಧಿಕಾರಿಗಳು ಬಂಧನ ಕಾರ್ಯಾಚರಣೆ ತೀವ್ರಗೊಳಿಸಿದ್ದಾರೆ.

ಈ ನಡುವೆ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಆರೋಪಿ ಟಿ.ನಾಸೀರ್‌ನನ್ನು ಹೆಚ್ಚಿನ ವಿಚಾರಣೆಗಾಗಿ ಎಂಟು ದಿನಗಳವರೆಗೆ ಎನ್‌ಐಎ ವಿಶೇಷ ನ್ಯಾಯಾಲಯದ ಆದೇಶದ ಮೇರೆಗೆ ಕಸ್ಟಡಿಗೆ ತೆಗೆದುಕೊಂಡಿರುವ ಸಿಸಿಬಿ ಪೊಲೀಸರು ಆತನನ್ನು ತೀವ್ರ ವಿಚಾರಣೆ ನಡೆಸಿದಾಗ ಗನ್ ಸರಬರಾಜು ಮಾಡಿರುವ ವಿವರಗಳನ್ನು ಬಾಯ್ಬಿಟ್ಟಿದ್ದಾನೆವಿವಿಧ 36 ಅಪರಾಧ ಪ್ರಕರಣಗಳಲ್ಲಿ ಭಾಗಿ ಯಾಗಿರುವ ನಾಸೀರ್ ಸೂಚನೆಯಂತೆ ಶಂಕಿತರು ಕೆಲಸ ವಿಧ್ವಂಸಕ ಕೃತ್ಯಗಳನ್ನು ನಡೆಸಲು ತಯಾರಿ ನಡೆಸಿದ್ದರು.

**ಜೈಲಿನಲ್ಲಿ ಫೋನ್ ಬಳಕೆ:** ಖತರ್ನಾಕ್ ನಾಸಿರ್ ಜೈಲಿನಲ್ಲಿ ಫೋನ್ ಹೆಚ್ಚು ಬಳಕೆ ಮಾಡಿರುವುದು ಸಿಸಿಬಿಯ ಐಎಸ್ ಡಿ ತಂಡದ ವಿಚಾರಣೆಯಲ್ಲಿ ಪತ್ತೆಯಾಗಿದೆ.ವಶಕ್ಕೆ ತೆಗೆದುಕೊಂಡಿರುವ ನಾಸೀರ್ ಜೈಲಿನಲ್ಲಿ ಬಳಸಿದ್ದ ಮೊಬೈಲ್ ಜಪ್ತಿ ಮಾಡಿ ಕಳೆದ ಕೆಲ ವರ್ಷಗಳಿಂದ ಆತ ಜೈಲಿನಲ್ಲಿ ನಿತ್ಯ ಸಂಭಾಷಣೆ ನಡೆಸುತ್ತಿದ್ದ ಕರೆಗಳ ಮಾಹಿತಿಯನ್ನು ಪಡೆದುಕೊಳ್ಳಲಾಗುತ್ತಿದೆ. ಜೈಲಿನಲ್ಲಿದ್ದುಕೊಂಡು ಅಕ್ರಮವಾಗಿ ನಾಸೀರ್ ಫೋನ್ ಬಳಸಿರುವುದಕ್ಕೆ ಸಹಕರಿಸಿರುವ ಜೈಲು ಸಿಬ್ಬಂದಿಯ ವಿಚಾರಣೆಗೆ ಪೊಲೀಸರು ಮುಂದಾಗಿದ್ದಾರೆ.

**ಸಿಬ್ಬಂದಿಗೆ ಸಂಕಷ್ಟ:** ನಾಸೀರ್ ಅಕ್ರಮಕ್ಕೆ ಹಣ ಪಡೆದುಕೊಂಡು ಜೈಲಿನ ಹಿರಿಯ ಅಧಿಕಾರಿಗಳು ಸಾಥ್ ನೀಡಿರುವುದು ಕಂಡುಬಂದಿದ್ದು ಇದರಿಂದ ನಾಸೀರ್‌ಗೆ ಸಹಾಯ ಮಾಡಿರುವ ಅಧಿಕಾರಿಗಳಿಗೆ ಇದೀಗ ಸಂಕಷ್ಟ ಎದುರಾಗಿದೆ.

ಐಎಸ್ ಡಿಯಿಂದ ನಾಸೀರ್ ಲಕ್ಷ ಲಕ್ಷ ಹಣ ಪಡೆದು ಮೊಬೈಲ್ ಬಳಸಲು ಬಿಟ್ಟಿರುವ ಸಿಬ್ಬಂದಿಯ ಪಟ್ಟಿ ರೆಡಿಯಾಗಿದ್ದು ಅವರೆಲ್ಲರಿಗೂ ನೊಟೀಸ್ ನೀಡಿ ವಿಚಾರಣೆಯನ್ನು ಸಿಸಿಬಿ ಪೊಲೀಸರು ನಡೆಸಲಿದ್ದಾರೆ.

**ಸಾಕ್ಷ್ಯಾಧಾರ ಪತ್ತೆ:** ಈ ನಡುವೆ ಬಂಧಿತ ಶಂಕಿತ ಉಗ್ರರಾದ ಸೈಯದ್ ಸುಹೇಲ್ ಖಾನ್, ಜಾಹೀದ್ ತಬ್ರೇಜ್, ಸೈಯದ್ ಮುದಾಸೀರ್ ಪಾಷಾ, ಮಹಮ್ಮದ್ ಫೈಜಲ್ ರಬ್ಬಾನಿ ಹಾಗೂ ಮೊಹಮ್ಮದ್ ಉಮರ್ ಖಾತೆಗಳಿಗೆ ವಿದೇಶದಿಂದ ಹಣ ಬಂದಿರುವುದಕ್ಕೆದೊರೆತಮಾಹಿತಿಯನ್ನುಆಧರಿಸಿ ತನಿಖೆಯನ್ನುಕೈಗೊಳ್ಳಲಾಗಿದೆ.ಧರ್ಮರಕ್ಷಣೆಗಾಗಿ ಬಾಂಬ್ ಸ್ಫೋಟಿಸುವಂತೆ ಹೇಳಿದ್ದ ನಾಸೀರ್, ಅದಕ್ಕೆ ಆರ್ಥಿಕ ಸಹಾಯ ಮಾಡುವುದಾಗಿ ತಿಳಿಸಿದ್ದ. ಇದಕ್ಕೆ ಜುನೇದ್ ಹಾಗೂ ಇತರರು ಒಪ್ಪಿದ್ದರು. ಇದಾದ ಬಳಿಕ ಬಂಧಿತ ಶಂಕಿತರ 20 ಪ್ರತ್ಯೇಕ ಬ್ಯಾಂಕ್ ಖಾತೆಗಳಿಗೆ 15 ಲಕ್ಷಕ್ಕೂ ಹೆಚ್ಚು ಹಂತ ಹಂತವಾಗಿ ಹಣ ಬಂದಿದ್ದು ಅದನ್ನು ಆಧರಿಸಿ ತನಿಖೆಯನ್ನು ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳೀಯರಿಂದ ಹಣ:** ನಗರ ಸೇರಿ ರಾಜ್ಯದಲ್ಲಿ 'ಬಾಂಬ್ ಸ್ಫೋಟಿಸಲು ಸಂಚು ರೂಪಿಸಿದ್ದ ಶಂಕಿತರ ಉಗ್ರರ ಖಾತೆಗಳಿಗೆ ಕೆಲ ಸ್ಥಳೀಯರು 8 ಲಕ್ಷ ಜಮೆ ಮಾಡಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.ದುಬೈ ಹಾಗೂ ಇತರೆ ದೇಶಗಳಲ್ಲಿರುವ ಕೆಲವರು, ಭಾರತದಲ್ಲಿ ಭಯೋತ್ಪಾದನೆ ಪ್ರಚೋದಿಸಿ ಶಾಂತಿ ಕದಡಲು ಸಂಚು ರೂಪಿಸುತ್ತಿದ್ದಾರೆ. ನಾಸೀರ್ ಮೂಲಕ ಜುನೇದ್ ಹಾಗೂ ಸಹಚರರಿಗೆ ಹಣ ನೀಡಿರುವ ವಿದೇಶಿಯರು, 'ತ್ವರಿತವಾಗಿ ಬಾಂಬ್ ಸ್ಫೋಟಿಸಿ' ಎಂಬುದಾಗಿ ಪದೇ ಪದೇ ಸಂದೇಶ ರವಾನಿಸುತ್ತಿದ್ದ ಮಾಹಿತಿಯನ್ನು ಶಂಕಿತರು ಬಾಯ್ಬಿಟ್ಟಿದ್ದಾರೆ ಎಂದು ತಿಳಿದುಬಂದಿದೆ.

# ಸಿಎಂ ಭೇಟಿ ಮಾಡಿದ ಹಿರಿಯ ಶಾಸಕರು



» **ಬೆಂಗಳೂರು**

ಶಾಸಕಾಂಗ ಸಭೆ ನಡೆದ ಬೆನ್ನಲ್ಲೆ ಕೆಲವು ಹಿರಿಯ ಶಾಸಕರು ಇಂದು ಬೆಳಿಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ಹಿರಿಯ ಶಾಸಕ ಲಕ್ಷ್ಮಣ್ ಸವದಿ, ಕೆ.ಎಂ.ಶಿವಲಿಂಗೇಗೌಡ ಮತ್ತು ಅಮರೇಗೌಡ ಬಯ್ಯಾಪುರ ಅವರು ಇಂದು ಬೆಳಿಗ್ಗೆ ಶಿವಾನಂದ ಸರ್ಕಲ್‌ನಲ್ಲಿರುವ ಮುಖ್ಯಮಂತ್ರಿಯವರ ಗೃಹ ಕಚೇರಿಯಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದರು.

ಶಾಸಕರು ಯಾವುದೇ ಸಮಸ್ಯೆಗಳಿದ್ದರೂ ನೇರವಾಗಿ ತಮ್ಮನ್ನು ಭೇಟಿ ಮಾಡಿ ಚರ್ಚೆ ನಡೆಸಬಹುದು. ಬಹಿರಂಗ ಹೇಳಿಕೆಗಳನ್ನು ನೀಡಿ ಗೊಂದಲ ಮೂಡಿಸಬೇಡಿ ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರ ಆರಂಭದಲ್ಲೇ ಎಚ್ಚೆತ್ತುಕೊಂಡಿದೆ. ಶಾಸಕರ ವೈಯಕ್ತಿಕ ಹಾಗೂ ಕ್ಷೇತ್ರದ ಸಮಸ್ಯೆಗಳಿಗೆ ಸ್ಪಂದಿಸಲು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಪ್ರತ್ಯೇಕ ಸಮಯ ಮೀಸಲಿಡಲಿದ್ದಾರೆ ಎಂದು ಹೇಳಲಾಗಿದೆ.

ಶಾಸಕರ ಪತ್ರ ಸಮರದ ಬಳಿಕ ಮುಂದಿನ ದಿನಗಳಲ್ಲಿ ಈ ರೀತಿಯ ಪರಿಸ್ಥಿತಿ ನಿರ್ಮಾಣವಾಗದಂತೆ ಮುನ್ನೆಚ್ಚರಿಕೆ ವಹಿಸಲು ಪ್ರತೀ ತಿಂಗಳು ಜಿಲ್ಲಾವಾರು ಶಾಸಕರ ಸಭೆನಡೆಸುವುದಾಗಿಮುಖ್ಯಮಂತ್ರಿ ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ. ಸಿದ್ದರಾಮಯ್ಯ ಸೂಚನೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಇಂದು ಇಬ್ಬರು ಶಾಸಕರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ.


ಇನ್ನುಮುಂದೆ ಮುಖ್ಯಮಂತ್ರಿಂ ರುವರು ಶಾಸಕರ ಭೇಟಿಗಾಗಿ ಪ್ರತ್ಯೇಕ ಸಮಯ ನಿಗದಿಪಡಿಸಲು ಚಿಂತನೆ ನಡೆಸಿದ್ದಾರೆ ಎಂದು ಹೇಳಲಾಗಿದೆ. ಈ ಹಿಂದೆ ಜೆಡಿಎಸ್, ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಶಾಸಕರ ಸಮಸ್ಯೆಗಳನ್ನು ಕೇಳುತ್ತಿಲ್ಲ ಎಂಬ ಅಸಮಾಧಾನದಿಂದಾಗಿಯೇ ಕಾಂಗ್ರೆಸ್‌ನ ಹದಿನಾಲ್ಕು, ಜೆಡಿಎಸ್‌ನ ಮೂವರು ಶಾಸಕರು ಪಕ್ಷಾಂತರಗೊಂಡಿದ್ದರು. ಸಮ್ಮಿಶ್ರ ಸರ್ಕಾರವು ಪತನವಾಗಿತ್ತು.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರ ಆರಂಭದಲ್ಲೇ ಎಚ್ಚೆತ್ತುಕೊಂಡಿದೆ. ಶಾಸಕರ ವೈಯಕ್ತಿಕ ಹಾಗೂ ಕ್ಷೇತ್ರದ ಸಮಸ್ಯೆಗಳಿಗೆ ಸ್ಪಂದಿಸಲು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಪ್ರತ್ಯೇಕ ಸಮಯ ಮೀಸಲಿಡಲಿದ್ದಾರೆ ಎಂದು ಹೇಳಲಾಗಿದೆ.


ಶಾಸಕರ ಪತ್ರ ಸಮರದ ಬಳಿಕ ಮುಂದಿನ ದಿನಗಳಲ್ಲಿ ಈ ರೀತಿಯ ಪರಿಸ್ಥಿತಿ ನಿರ್ಮಾಣವಾಗದಂತೆ ಮುನ್ನೆಚ್ಚರಿಕೆ ವಹಿಸಲು ಪ್ರತೀ ತಿಂಗಳು ಜಿಲ್ಲಾವಾರು ಶಾಸಕರ ಸಭೆನಡೆಸುವುದಾಗಿಮುಖ್ಯಮಂತ್ರಿ ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.


# ಎಲೆಕ್ಟ್ರಿಕ್ ಬಸ್ ಸಂಖ್ಯೆ ಹೆಚ್ಚಳಕ್ಕೆ ಕ್ರಮ: ಸಚಿವ ರಾಮಲಿಂಗರೆಡ್ಡಿ

» **ಬೆಂಗಳೂರು**



ರಾಜ್ಯ ವ್ಯಾಪಿ ಎಲ್ಲಿಯೂ ಸರಕಾರಿ ಬಸ್ ಗಳ ಕೊರತೆ ಉಂಟಾಗದಂತೆ ನೋಡಿ ಕೊಳ್ಳಲಾಗುವುದು. ಜೊತೆಗೆ ಎಲೆಕ್ಟ್ರಿಕ್ ಬಸ್ ಗಳ ಸಂಖ್ಯೆಯೂ ಹೆಚ್ಚಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.ನಗರದಲ್ಲಿಂದು ಶಾಂತಿನಗರ ಕೇಂದ್ರ ಕಚೇರಿಯಲ್ಲಿ ಟಿಎಂಎಲ್ ಸ್ಮಾರ್ಟ್ ಮೊಬಿಲಿಟಿ ಸಿಟಿ ಲಿಮಿಟೆಡ್‌ನ ಮೊದಲ ಎಲೆಕ್ಟ್ರಿಕ್ ಪ್ರೊಟೊಟೈಪ್ ಬಸ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು. ಶಕ್ತಿ ಯೋಜನೆಯಿಂದ ಎಲ್ಲಾ ನಿಗಮದ ಬಸ್ ಗಳಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದೆ. ಪೂರಕವಾಗಿ ಬಸ್ ಗಳ ಸಂಖ್ಯೆ ಹೆಚ್ಚಾಗಿದ್ದು, ಒತ್ತಡ ಇರುವ ಕಡೆ ಬಸ್ ಗಳನ್ನು ಒದಗಿಸಲು ಯೋಜನೆ ನಡೆಸಲಾಗಿದೆ. ಹೀಗಾಗಿ, ಪೂರ್ವಭಾವಿ ಆಗಿ ಎಲೆಕ್ಟ್ರಿಕ್ ಬಸ್ ಗೆ ಚಾಲನೆ ನೀಡಲಾಗುತ್ತಿದೆ. ಶೀಘ್ರದಲ್ಲಿ ಎಲ್ಲಾ ಎಲೆಕ್ಟ್ರಿಕ್ ಬಸ್ ಗಳ ಸೇವೆ ಸಿಗಲಿದೆ ಎಂದರು.ಕೇಂದ್ರ ಸರ್ಕಾರದ ಫೇಮ್–2 ಯೋಜನೆಯಡಿಯಲ್ಲಿ 921 ಎಲೆಕ್ಟ್ರಿಕ್ ಹವಾನಿಯಂತ್ರಣ ರಹಿತ ಬಸ್ಸುಗಳು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಸೇರ್ಪಡೆಯಾಗಿವೆ ಎಂದ ಅವರು, ಇ–ಬಸ್ ಗಳು ಕಡಿಮೆ ವ್ಯಚ್ಚದಲ್ಲಿ ನಿರ್ವಹಣೆಯಾಗಲಿದೆ.ಇ–ಬಸ್ ಗಳಿಂದ ಯಾವುದೇ ತೊಂದರೆವಿಲ್ಲ.ಬಸ್ ಗಳನ್ನು ವಿಸ್ತರಿಸುವ ಚಿಂತೆಯೂ ಇದೆ ಎಂದು ಹೇಳಿದರು.ಬಿಎಂಟಿಸಿ ನಿರ್ದೇಶಕಿ ಸತ್ಯಾವತಿ ಮಾತನಾಡಿ, ಟಾಟಾಮೋಟರ್ ಮೂಖಾಂತರ ಎಲೆಕ್ಟ್ರಿಕ್ ಬಸ್ ಗಳು ಬಂದಿದ್ದು, ಸದ್ಯಕ್ಕೆ ಒಂದು ಎಲೆಕ್ಟ್ರಿಕ್ ಬಸ್ ಗೆ ಚಾಲನೆ ನೀಡಲಾಗಿದೆ. ಇದರಲ್ಲಿ ಅಂಗವಿಕಲರಿಗೆ ಮಹಿಳೆಯರಿಗೆ ಅನುಕೂಲ ದೃಷ್ಟಿಯಿಂದ ಸಿಸಿ ಟಿವಿ ಕ್ಯಾಮರಾ ಅಳವಡಿಕೆ ಮಾಡಲಾಗಿದ್ದು, ಒಂದು ಬಸ್ಸಿನಲ್ಲಿ 40 ಜನ ಪ್ರಯಾಣಿಕರಿಗೆ ಅವಾಕಾಶ ಇದೆ. ಚಾರ್ಜ್ ಗೆ ಏಕಕಾಲದಲ್ಲಿ 200 ಕಿಲೋ ಚಾಲನೆ ಮಾಡಬಹುದು ಎಂದು ವಿವರಿಸಿದರು.

## ವಂದೇ ಭಾರತ್ ರೈಲಿನ ಮೇಲೆ ಮತ್ತೆ ಕಲ್ಲು ಎಸೆತ

» **ರಾಮನಗರ**

ಪಟ್ಟಣದ ಹೊರವಲಯದಲ್ಲಿ ಮೈಸೂರಿನಿಂದ ಚನ್ನೈಗೆ ತೆರಳುವ ವಂದೇ ಭಾರತ್ ರೈಲಿನ ಮೇಲೆ ಕಿಡಿಗೇಡಿಗಳು ಮತ್ತೆ ಕಲ್ಲೆಸೆದಿದ್ದು, ಗಾಜು ಪುಡಿ ಪುಡಿಯಾಗಿದೆ. ತಿಂಗಳಲ್ಲೇ ನಾಲ್ಕೈದು ಬಾರಿ ಕಲ್ಲು ಎಸೆಯಲಾಗಿದೆ. ಕಿಟಕಿ ಗಾಜು ಪುಡಿ ಪುಡಿಯಾಗಿ ಸೀಟಿನ ಮೇಲೆ ಬಿದ್ದಿವೆ.






**ಪ್ರಮುಖ ಸುದ್ದಿ**

# ಅಲೆಮಾರಿ ಜನಾಂಗದ ಸಾಂಸ್ಕೃತಿಕ ಕಲೋತ್ಸವ

» **ಚಿತ್ರದುರ್ಗ**



ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಮಕ್ಕಳ ಶಿಕ್ಷಣ, ಹಾಸ್ಟೆಲ್ ಹಾಗೂ ಮೂಲಭೂತ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸುವುದಕ್ಕಾಗಿ ಜಿಲ್ಲಾ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಜಿಲ್ಲಾ ಮಟ್ಟದ ಶಿಕ್ಷಣ, ಸಾಹಿತ್ಯ, ಸಾಂಸ್ಕೃತಿಕ ಕಲೋತ್ಸವವನ್ನು ಜು.30 ರಂದು ಬೆಳಿಗ್ಗೆ 10–30 ಕ್ಕೆ ಕ್ರೀಡಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಗಳ ಒಕ್ಕೂಟದ ಗೌರವಾಧ್ಯಕ್ಷ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಮಹಾಲಿಂಗಪ್ಪ ಹೇಳಿದರು.

ಪ್ರವಾಸಿಮಂದಿರದಲ್ಲಿಶುಕ್ರವಾರಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ತಳಸಮುದಾಯಕ್ಕೆ ಸೇರಬೇಕಾಗಿರುವ ಹಣದಲ್ಲಿ ರಾಜಕಾರಣಿಗಳು ಸಿ.ಸಿ.ರಸ್ತೆಗೆ ಹಾಕಿ ಕಮೀಷನ್ ಹೊಡೆಯುವುದರಲ್ಲಿ ಕಾಲ ಕಳೆದರೆ ವಿನಃ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಮಕ್ಕಳ ಶಿಕ್ಷಣ ಹಾಗೂ ಹಾಸ್ಟೆಲ್ ಸೌಲಭ್ಯಕ್ಕೆ ಒತ್ತು ಕೊಡಲಿಲ್ಲ. ಆಗ ನಾನು ಹೋರಾಡಿದ ಫಲವಾಗಿ ಚಿತ್ರದುರ್ಗಕ್ಕೆ ಮೂರು ಹಾಸ್ಟೆಲ್‌ಗಳನ್ನು ನೀಡಲಾಗಿದೆ. ಹಾಗಾಗಿ ಈ ಸಮ್ಮೇಳನದ ಮೂಲಕ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರಲ್ಲಿ ಉತ್ತೇಜನ ತುಂಬಲಾಗುವುದು ಎಂದು ಹೇಳಿದರು.

ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಗಳ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರತಾಪ್ ಜೋಗಿ ಮಾತನಾಡಿ ಜಿಲ್ಲೆಯಲ್ಲಿ ಪ್ರಪ್ರಥಮವಾಗಿ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಶಿಕ್ಷಣ, ಸಾಹಿತ್ಯ, ಸಾಂಸ್ಕೃತಿಕ ಕಲೋತ್ಸವವನ್ನು ನಗರದಲ್ಲಿ ಏರ್ಪಡಿಸಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸಲಿದ್ದಾರೆ.

ಮುರುಘಾಮಠದ ಬಸವಪ್ರಭು ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಕೇಂದ್ರ ಮಂತ್ರಿ ಎ.ನಾರಾಯಣಸ್ವಾಮಿ, ಶಾಸಕರುಗಳಾದ ಎನ್.ವೈ.ಗೋಪಾಲಕೃಷ್ಣ, ಟಿ.ರಘುಮೂರ್ತಿ, ಎಂ.ಚಂದ್ರಪ್ಪ, ಬಿ.ಜಿ.ಗೋವಿಂದಪ್ಪ, ಕೆ.ಸಿ.ವೀರೇಂದ್ರಪಪ್ಪಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಒಕ್ಕೂಟದ ಅಧ್ಯಕ್ಷ ತುಕಾರಾಮ ನಾಗಪ್ಪ ವಾಪರ ಇನ್ನು ಅನೇಕು ಆಗಮಿಸಲಿದ್ದಾರೆ. ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳು, ಕಲೆ ಸಾಂಸ್ಕೃತಿಕ ಸಮಾಜಸೇವೆ, ಅಂತರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಿ ವಿಜೇತರಾದವರನ್ನು ಕಲೋತ್ಸವದಲ್ಲಿ ಸನ್ಮಾನಿಸಲಾಗುವುದು. ಗೋಸಾಯಿಗಳು, ಚಿಂದಿ ಆರಿಸುವವರು, ಕಿನ್ನರಿಜೋಗಿಗಳು, ದಾಸರು ಹೀಗೆ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರು ತಮ್ಮ ತಮ್ಮ ಕುಲಕಸುಬನ್ನು ಸೂಚಿಸುವ ವೇಷಗಳನ್ನು ಧರಿಸಿ ಕಲೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆಂದು ತಿಳಿಸಿದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |

| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |

## ಫಾಸ್ಟ್ ನ್ಯೂಸ್

### ವೀರಶೈವ ಲಿಂಗಾಯಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಎಸ್.ಎಸ್.ಎಲ್.ಸಿ. ಹಾಗೂ ದ್ವಿತಿಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿರುವ ಕುಂಚಿಗ ವೀರಶೈವ ಲಿಂಗಾಯಿತ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2022–23 ನೇ ಸಾಲಿನಲ್ಲಿ ನಡೆದ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದಿರುವ ಕುಂಚಿಗ ವೀರಶೈವ ಲಿಂಗಾಯಿತ ವಿದ್ಯಾರ್ಥಿಗಳು ದೃಢೀಕರಿಸಿದ ಅಂಕಪಟ್ಟಿ ಜೆರಾಕ್ಸ್, ಎರಡು ಪಾಸ್‌ಪೋರ್ಟ್ ಅಳತೆಯ ಫೋಟೋದೊಂದಿಗೆ ಆಗಸ್ಟ್ 14 ರ ಸಂಜೆ ಐದು ಗಂಟೆಯೊಳಗಾಗಿ ಎಲ್.ಬಿ.ರಾಜಶೇಖರಪ್ಪ, ಪ್ರಧಾನ ಕಾರ್ಯದರ್ಶಿ, ಕುಂಚಿಗ ವೀರಶೈವ ಲಿಂಗಾಯಿತ ಸಮಾಜ, ಮಾರುತಿ ಕಾಂಪ್ಲೆಕ್ಸ್, ಎಸ್.ಬಿ.ಐ. ಬ್ಯಾಂಕ್ ಎದುರು, ಕಾಮಧೇನು ಹಣಕಾಸು ಸಂಸ್ಥೆ, ಚಿತ್ರದುರ್ಗ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಸಹ ಕಾರ್ಯದರ್ಶಿ ಹೆಚ್.ಕುಬೇರಪ್ಪ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ: 9880933099, 9448783291 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

### ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆ ವತಿಯಿಂದ ಉಚಿತ ಕ್ಯಾನ್ಸರ್ ತಪಾಸಣೆ



» ಮೊಳಕಾಲ್ಮುರು

ಮೊಳಕಾಲ್ಮುರು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾವಣಗೆರೆಯ ಬಾಪುಜಿ ಕ್ಯಾನ್ಸರ್ ಆಸ್ಪತ್ರೆ ಟ್ರಸ್ಟ್(ರಿ) ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆ ಸಂಶೋಧನೆ ಸಂಸ್ಥೆಯು ಉಚಿತ ಕ್ಯಾನ್ಸರ್ ತಪಾಸಣೆಯ ಕಾರ್ಯಕ್ರಮ ಆಯೋಜಿಸಲಾಗಿತ್ತು.ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಕ್ಯಾನ್ಸರ್ ತಪಾಸಣೆಯ ಕಾರ್ಯಾಗಾರದಲ್ಲಿ 32 ರೋಗಿಗಳನ್ನು ತಪಾಸಣೆ ಮಾಡಲಾಗಿದ್ದು ಅದರಲ್ಲಿ 15 ಕ್ಯಾನ್ಸರ್ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ 15 ಪ್ರಕರಣಗಳಲ್ಲಿ ಗರ್ಭ ಕೋಶ ತೊಂದರೆ, ಬಾಯಿ ಮತ್ತು ಗಂಟಲು, ಹೆಣ್ಣುಮಕ್ಕಳ ಸ್ತನ ಕ್ಯಾನ್ಸರ್ ಇರುವ ರೋಗಿಗನ್ನು ಪತ್ತೆ ಹಚ್ಚಿ ಚಿಕಿತ್ಸೆಗೆ ಸೂಚಿಸಲಾಯಿತು ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ಡಾ ಅಜಯ್ ಸರ್ಜನ್ ಮಾತನಾಡಿ ಕ್ಯಾನ್ಸರ್ ಮಾರಕ ರೋಗವನ್ನು ಪತ್ತೆ ಹಚ್ಚಿ ಸಕಾಲಕ್ಕೆ ಚಿಕಿತ್ಸೆ ಪಡೆದು ಕೊಂಡರೆ ಅರೋಗ್ಯದಲ್ಲಿ ತೊಂದರೆ ಆಗುವುದಿಲ್ಲ. ಸಾರ್ವಜನಿಕರು ಸೂಕ್ತ ಕಾಲದಲ್ಲಿ ವೈದ್ಯರಲ್ಲಿ ತಪಾಸಣೆ ಮಾಡಿಸದೆ ಹೋದರೆ ತೊಂದರೆ ಅನುಭವಿಸ ಬೇಕಾಗುತ್ತದೆ . ಯಾವುದೇ ಕಾಯಿಲೆ ಇರಲಿ ಪ್ರಥಮ ದ್ವಿತೀಯ ಅಂತದಲ್ಲಿ ಸರಿ ಪಡಿಸಬಹುದು ಎಂದು ತಿಳಿಸಿದರು ದಾವಣಗೆರೆಯ ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆ ಹಾಗೂ ಸಂಶೋಧನೆ ಸಂಸ್ಥೆಯು ಉಚಿತವಾಗಿ ಕ್ಯಾನ್ಸರ್ ತಪಾಸಣೆಯನ್ನು ಮೊಳಕಾಲ್ಮುರು ಸರ್ಕಾರಿ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾಗುವುದು ಇದರ ಸದುಯೋಗ ಪಡಿಸಿಕೊಳ್ಳಬೇಕಾಗಿ ತಿಳಿಸಿದರು ಕಾರ್ಯಕ್ರಮದಲ್ಲಿ ಸಂತೋಷ ಮಂಜುನಾಥ್ ಮಾರ್ಕೆಟಿಂಗ್ ಆಫೀಸರ್ ಆಸ್ಪತ್ರೆ ಸಿಬ್ಬಂದಿ ನಿಖಿಲ್ ಹಾಗೂ ಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು

### ಮದ್ರಾಸ್ ಐ ವೈರಾಣು ಕುರಿತು ಆರೋಗ್ಯ ಕೇಂದ್ರದಲ್ಲಿ ಜಾಗೃತಿ

» ದಾವಣಗೆರೆ

ಹವಾಮಾನ ವ್ಯತ್ಯಾಸದಿಂದ ಮತ್ತು ನಿರಂತರವಾಗಿ ಬರುತ್ತಿರುವ ಕಣ್ಣಿನ ಸಮಸ್ಯೆಗೆ ಕಾರಣಗಳು ಮತ್ತು ಅದಕ್ಕೆ ಇರುವ ಪರಿಹಾರಗಳ ಕುರಿತು ವೈದ್ಯಾಧಿಕಾರಿ ಡಾ. ವೆಂಕಟೇಶ್ ಎಲ್.ಡಿ ತಿಳಿಸಿದರು. ಗುರುವಾರ ಕಕ್ಕರಗೊಳ್ಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಾಮಾನ್ಯವಾಗಿ ಚಳಿಗಾಲದಲ್ಲಿ ಕಾಣಿಸಿಕೊಳ್ಳುವ ಮದ್ರಾಸ್ ಐ ರೋಗದ ಕುರಿತ ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು. ತೇವಾಂಶ ಹೆಚ್ಚಾದಾಗ ಅಥವಾ ಚಳಿಗಾಲದ ವಾತಾವರಣದಲ್ಲಿ ಹುಟ್ಟಿಕೊಳ್ಳುವ ಈ ವೈರಾಣುಗಳು ನೇರವಾಗಿ ಕಣ್ಣಿನ ಮೇಲೆ ಪರಿಣಾಮವುಂಟು ಮಾಡುತ್ತಿದ್ದು ಸಾರ್ವಜನಿಕರು ಎಚ್ಚೆತ್ತುಕೊಂಡು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದರು

ಮದ್ರಾಸ್ ಐ ಮನುಷ್ಯನ ಕಣ್ಣಿನ ಬಿಳಿ ಭಾಗವು ಕೆಂಪಾಗಿಸುತ್ತದೆ. ಕಣ್ಣುಗಳಲ್ಲಿ ಉರಿ, ನೋವುಉಂಟಾಗಿ, ಕಣ್ಣುಗಳಿಂದ ನಿರಂತರವಾಗಿ ನೀರು ಹೊರಬರುವುದು ಹಾಗೂ ಕಣ್ಣು ಊದಿಕೊಂಡಂತಾಗುತ್ತವೆ.ವೈರಾಣು ಬಾರದಂತೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳೆಂದರೆ, ಹೆಚ್ಚಿನ ಜನ ಇರುವ ಪ್ರದೇಶಗಳಿಗೆ ಹೋಗುವುದನ್ನು ಕಡಿಮೆ ಮಾಡಬೇಕು. ಪದೇ ಪದೇ ಕಣ್ಣುಗಳನ್ನು ಮುಟ್ಟಿಕೊಳ್ಳಬಾರದು ಹಾಗೂ ಆಗಾಗ ಸೋಪಿನಿಂದ ಕೈ ತೊಳೆಯುವುದನ್ನು ಅಭ್ಯಾಸ ಮಾಡಬೇಕು. ವೈರಾಣು ತಗುಲಿ ಕಣ್ಣಿನ ಉರಿ ಊತ ಬಂದ ವ್ಯಕ್ತಿ ಜೊತೆ ನಿಕ್ಕಟ ಸಂಪರ್ಕ ಹೊಂದುವುದನ್ನು ಹಾಗೂ ಅವರು ಉಪಯೋಗಿಸಿದ ಟಾವೆಲ್, ತಲೆದಿಂಬನ್ನು ಇತರರು ಉಪಯೋಗಿಸದಂತೆ ನೋಡಿಕೊಳ್ಳಬೇಕು. ಎಂದರು. ವೈದ್ಯರು, ಆರೋಗ್ಯ ಸಿಬ್ಬಂದಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಕೃಷಿಯಲ್ಲಿ ಅಧುನಿಕ ತಂತ್ರಜ್ಞಾನ ಬಳಸಿ: ನವೀನ್

» ಚಿತ್ರದುರ್ಗ

ಇಂದಿನದಿನಮಾನದಲ್ಲಿಕೃಷಿಯಲ್ಲಿಅಧುನಿಕ ತಂತ್ರಜ್ಞಾನವನ್ನು ಬಳಕೆ ಮಾಡುವುದರ ಮೂಲಕ ಕಡಿಮೆ ಗೊಬ್ಬರವನ್ನು ಬಳಕೆ ಮಾಡಿ ಹೆಚ್ಚಿನ ರೀತಿಯಲ್ಲಿ ಬೆಳೆಯನ್ನು ಬೆಳೆಯಬಹುದಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್ ತಿಳಿಸಿದರು.



ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿನ ಬಿಜೆಪಿರೈತಮೋರ್ಚಾದಿಂದಶ್ರೀರಾಮರೆಡ್ಡಿ ಬಿ.ಎಂ.ಶಿವಮೂರ್ತಪ್ಪ ಅಂಗಡಿಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು 1.25 ಲಕ್ಷ ಪ್ರಧಾನ ಮಂತ್ರಿ ಕಿಸಾನ್ ಸಮೃದ್ಧಿ ಕೇಂದ್ರಗಳನ್ನು ರಾಷ್ಟ್ರಕ್ಕೆ ಸಮರ್ಪಣೆ ಕಾರ್ಯಕ್ರಮದ ನಂತರ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ವಿಶ್ವದ ವಿವಿಧ ದೇಶದಲ್ಲಿ ಆಹಾರದ ಕೊರತೆ ಉಂಟಾಗಿ ಅಲ್ಲಿನ ಜನತೆ ಆಹಾರಕ್ಕಾಗಿ ಅಂಗಡಿಗಳ ಮೇಲೆ ಧಾಳಿಯನ್ನು ಮಾಡುತ್ತಿದ್ದಾರೆ ಆದರೆ ನಮ್ಮ ದೇಶದಲ್ಲಿ ಇದರ ಕೊರತೆ ಇಲ್ಲದೆ ಎಲ್ಲರು ಸಹಾ ಸಮೃದ್ದವಾಗಿ ಆಹಾರವನ್ನು ಸೇವನೆ ಮಾಡುತ್ತಿದ್ದಾರೆ ಇದಕ್ಕೆ ಕಾರಣ ನಮ್ಮ ಪ್ರಧಾನ ಮಂತ್ರಿಗಳು ಕೃಷಿಗೆ ನೀಡಿದ ಒತ್ತು ಎನ್ನಬಹುದಾಗಿದೆ. ಯಾವ ದೇಶದಲ್ಲಿ ಕೃಷಿಗೆ ಮಾನ್ಯತೆಯನ್ನು ನೀಡುವುದಿಲ್ಲವೂ ಅಂತಹ ದೇಶ ಅವನತಿಯತ್ತ ಹೋಗುತ್ತದೆ ಎನ್ನುವುದಕ್ಕೆ ಬೇರೆ ದೇಶಗಳಲ್ಲಿ ನಡೆಯುತ್ತಿರುವ ಧಾಳಿಗಳು ಸಾಕ್ಷಿಯಾಗಿವೆ. ವಿವಿಧ ದೇಶದಲ್ಲಿ ಅಕ್ಕಿಗೆ ಸಾವಿರಾರು ರೂ.ಗಳ ದರವಿದೆ. ಆದರೆ ನಮ್ಮ ದೇಶದಲ್ಲಿ ಇದಾವುದರ ಕೊರತೆ ಇಲ್ಲದೆ ಸಾಲಿಸಾಗಿ ಆಹಾರ ಸಿಗುವಂತಾಗಿದೆ ಇದಕ್ಕೆ ಕಾರಣ ಸರ್ಕಾರ ರೈತರಿಗೆ ನೀಡುತ್ತಿರುವ ಪ್ರೋತ್ಸಾಹ ಹಾಗೂ ರೈತರು ಅದರಂತೆ ದುಡಿಮೆಯನ್ನು ಮಾಡುವುದರ ಮೂಲಕ ದೇಶದ ಜನತೆ ಆಹಾರವನ್ನು ನೀಡುತ್ತಿರುವುದು ಆಗಿದೆ ಎಂದರು. ಯಾವ ದೇಶದಲ್ಲಿ ರೈತಾಪಿ ವರ್ಗ ಚನ್ನಾಗಿ ಅಂತಹ ದೇಶ ಉತ್ತಮವಾಗಿರಲು ಸಾಧ್ಯವಿದೆ. ಇಂದು ಪ್ರಧಾನ ಮಂತ್ರಿಗಳು ರೈತರಿಗಾಗಿ ಮೂರು ಯೋಜನೆಯನ್ನು ಜಾರಿ ಮಾಡಿದ್ದಾರೆ, ಇದರ ಪ್ರಯೋಜನವನ್ನು ರೈತಾಪಿ ವರ್ಗದವರು ಪಡೆಯಬೇಕಿದೆ. ಇಂದು ಪ್ರಧಾನ ಮಂತ್ರಿ ಸಮ್ಮಾನ ಯೋಜನೆಯ 14ನೇ ಕಂತಿನ ಹಣ ಬಿಡುಗಡೆಯಾಗುತ್ತಿದೆ. ದೇಶದಲ್ಲಿ ರೈತ ಉಪಯೋಗಕ್ಕಾಗಿ ಪ್ರಧಾನ ಮಂತ್ರಿಗಳು 1600 ಕೃಷಿ ಉತ್ಪನ್ನಗಳ ಕೇಂದ್ರಗಳನ್ನು ಜಾರಿ ಮಾಡುತ್ತಿದ್ದಾರೆ. ಇದರಿಂದ ರೈತನಿಎಗೆ ಒಂದೇ ಸೂರಿನಡಿಯಲ್ಲಿ ಎಲ್ಲಾ ವಸ್ತುಗಳು ಸಿಗಲಿವೆ. ಇಂದಿನ ದಿನಮಾನದಲ್ಲಿ ಕೈಷಿಯಲ್ಲಿ ಉತ್ತಮವಾದ ಆವಿಷ್ಕಾರಗಳು ಆಗಿವೆ. ಅದನ್ನು ಕೃಷಿಯಲ್ಲಿ ಬಳಕೆ ಮಾಡುವುದರ ಮೂಲಕ ಕಡಿಮೆ ಜಾಗದಲ್ಲಿ ಕಡಿಮೆ ಗೊಬ್ಬರವನ್ನು ಬಳಕೆ ಮಾಡುವುದರ ಮೂಲಕ ಉತ್ತಮವಾದ ಇಳುವರಿಯನ್ನು ಪಡೆಯಬಹುದಾಗಿದೆ ಎಂದು ನವೀನ್ ತಿಳಿಸಿದರು.

ಇಂದಿನ ದಿನಮಾನದಲ್ಲಿ ರೈತರ ಮಕ್ಕಳು ರೈತರಾಗುತ್ತಿಲ್ಲ ಅವರ ಪೋಷಕರೆ ಇದು ಬೇಡ ಬೇರೆ ಕೆಲಸವನ್ನು ಮಾಡುವಂತೆ ಪ್ರೇರೇಪಿಸುತ್ತಿದ್ದಾರೆ ಆದರೆ ಇಂದಿನ ಅಧುನಿಕ ತಂತ್ರಜ್ಞಾನವನ್ನು ಬಳಕೆ ಮಾಡುವುದರ ಮೂಲಕ ಉತ್ತಮವಾದ ಕೃಷಿಯನ್ನು ಮಾಡಬಹುದಾಗಿದೆ ಇದರ ಬಗ್ಗೆ ಅವರಿಗೆ ಅರಿವು ಜಾಗೃತಿಯನ್ನು ಮೂಡಿಸಬೇಕಿದೆ. ಕೃಷಿ ಬದುಕಿನಲ್ಲಿ ನೆಮ್ಮದಿ ಇದೆ ಎಂಬುದನ್ನು ಹಾಗೂ ಇದರಿಂದ ಉತ್ತಮವಾದ ಬದುಕನ್ನು ನಡೆಸಬಹುದೆಂದು ಸಹಾ ತೋರಿಸ ಬಹುದಾಗಿದೆಎಂದಅವರು,ಚಿತ್ರದುರ್ಗದಲ್ಲಿ ತೋಟಗಾರಿಕೆ ಉತ್ತಮವಾಗಿದೆ ಅದರೆ ಅದರ ಸಂಗ್ರಹಣೆಗೆ ಜಾಗ ಇಲ್ಲವಾಗಿದೆ ಇದರಿಂದ ಸರ್ಕಾರಕ್ಕೆ ಇದರ ಬಗ್ಗೆ ಮಾತನಾಡಿದ್ದೇನೆ ನಮ್ಮ ಜಿಲ್ಲೆಯೂ ಸಹಾ ಏರ್‌ಪೋಟಿಗೆ ಹತ್ತಿರವಾಗಿದೆ. ಆದ್ದರಿಂದ ಇಲ್ಲಿ ಶೀಥಲಿಕರಣ ಘಟಕಗಳನ್ನು ಪ್ರಾರಂಭ ಮಾಡುವುದರಿಂದ ರೈತರು ಬೆಳೆದ ಬೆಳೆಗಳನ್ನು ಸಂಗ್ರಹ ಮಾಡಲು ಅನುಕೂಲವಾಗುತ್ತದೆ ಎಂದು ನಿಮ್ಮಗಳ ಪರವಾಗಿ ಸದನದಲ್ಲಿ ಧ್ವನಿ ಎತ್ತಿರುವುದಾಗಿ ತಿಳಿಸಿದರು.

ಕೃಷಿ ಅಧಿಕಾರಿಗಳಾದ ಮಂಜುನಾಥ್ ಮಾತನಾಡಿ, ನಮ್ಮಲ್ಲಿ ಕಡಿಮೆ ದರದಲ್ಲಿ ರಸಗೊಬ್ಬರಗಳು ಸಿಗುತ್ತವೆ ಆಧುನಿಕ ತಂತ್ರಗಳನ್ನು ಬಳಕೆ ಮಾಡುವುದರ ಮೂಲಕ ಕೃಷಿಯನ್ನು ಉತ್ತಮಗೊಳಿಸಬಹುದಾಗಿದೆ. ಈ ಹಿಂದೆ ಸಾವಯವ ಗೊಬ್ಬರವನ್ನು ಬಳಕೆ ಮಾಡುವುದರ ಮೂಲಕ ಭೂಮಿ ಚನ್ನಾಗಿ ಇತ್ತು ಆದರೆ ಇತ್ತೀಚೆಗೆ ರಸಗೊಬ್ಬರವನ್ನು ಹಾಕುವುದರ ಮೂಲಕ ಭೂಮಿಯನ್ನು ಹಾಳು ಮಾಡಲಾಗಿದೆ. ಸಾವಯವ ಗೊಬ್ಬರ ಬಳಕೆ ಕಡಿಮೆಯಾಗಿದ್ದು ಇದರಿಂದ ಇಳುವರಿ ಕೂಡ ಕಡಿಮೆಯಾಗಿದೆ ಎಂದ ಅವರು ಕೇಂದ್ರ ಸರ್ಕಾರ ರೈತರ ಉಪಯೋಗಕ್ಕಾಗಿ ಕಿಸಾನ್ ಸಮ್ಮನ್ ಯೋಜನೆಯನ್ನು ಪ್ರಾರಂಭ ಮಾಡಿತ್ತು ಇದರಲ್ಲಿ ನಮ್ಮ ಜಿಲ್ಲೆಯಲ್ಲಿ 2,13,761 ರೈತರಿಗೆ ಇದುವರೆವಿಗೂ 13 ಕೋಟಿ ರೂಗಳನ್ನು ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ಅಧ್ಯಕ್ಷ ಎ.ಮುರಳಿಧರ, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿದ್ದಾಪುರದ ಸುರೇಶ್, ಬಿಜೆಪಿ ರೈತ ಮೂರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್, ಪ್ರಶಾಂತ ಕುಮಾರ್, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ನಂದಿ ನಾಗರಾಜ್,ರಸಗೊಬ್ಬರ ಮಾರಾಟಗಾರರ ಸಂಘದ ಅಧ್ಯಕ್ಷರಾದ ರೇವಣಸಿದ್ದಪ್ಪ, ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜನ್, ಹಸಿರು ಸೇನೆಯ ನಾಗರಾಜು, ಸಂಪತ್ ಕುಮಾರ್ ನರೇಂದ್ರ ಕುಮಾರ್, ಅಮರನಾಥ್ ರೆಡ್ಡಿ, ಪ್ರಸನ್ನ, ಪ್ರಭಾಕರ್ ಭಾಗವಹಿಸಿದ್ದರು.

# ಧಾರ್ಮಿಕ ಕಾರ್ಯಕ್ರಮಗಳಿಂದ ಮಾತ್ರ ಬದುಕಿನ ಯಶಸ್ಸು ಸಾಧ್ಯ: ಕೃಷ್ಣಮೂರ್ತಿ

## ವಾಸವಿ ಮಹಿಳಾ ಸಂಘದ ವತಿಯಿಂದ ಏಡುಕೊಂಡಲಸ್ವಾಮಿ ವಿಶೇಷ ಪೂಜೆ





» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ನಗರದ ವಾಸವಿ ಮಹಿಳಾ ಸಂಘ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಎಲ್ಲರಿಗೂ ದೇವರ ಬಗ್ಗೆ ಇರುವ ಅಪಾರವಾದ ಭಕ್ತಿ, ಶ್ರದ್ದೆಯನ್ನು ವ್ಯಕ್ತಪಡಿಸಲು ಸಾಧ್ಯವಾಗುತ್ತಿದೆ. ಪೂಜಾ ಕಾರ್ಯಗಳಿಂದ ಮನಸ್ಸು ಶುದ್ಧಿಯಾಗುವುದಲ್ಲದೆ, ಎಲ್ಲಾ ಕಾರ್ಯಗಳಿಗೆ ಪ್ರೇರಣೆ ಸಿಗಲಿದೆ ಎಂದು ಆರ್ಯವೈಶ್ಯ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ ತಿಳಿಸಿದರು.

ಅವರು, ನಗರದ ವಾಸವಿ ಮಹಲ್‌ನ ಆವರಣದಲ್ಲಿರುವ ವಾಸವಿ ದೇವಸ್ಥಾನದಲ್ಲಿ ವಾಸವಿ ಮಹಿಳಾ ಸಂಘದಿಂದ ಹಮ್ಮಿಕೊಂಡಿದ್ದ ಏಡುಕೊಂಡಲಸ್ವಾಮಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ದೇವರು ಮತ್ತು ಗುರುಗಳ ಅನುಗ್ರಹ ಪಡೆಯಬೇಕಾದರೆ ನಮ್ಮಲ್ಲಿ ಏಕಾಗ್ರತೆ ಮತ್ತು ಭಕ್ತಿಯ ನಿಷ್ಠೆ ಬೇಕಾಗುತ್ತದೆ. ಪ್ರತಿಯೊಬ್ಬ ವ್ಯಕ್ತಿಯೂ ಸಂತೃಪ್ತನಾಗುವುದು ಇಂತಹ ಧಾರ್ಮಿಕ ಕಾರ್ಯಗಳ ಆಚರಣೆಯಿಂದ ಮಾತ್ರ. ವಾಸವಿ ಮಹಿಳಾ ಸಂಘ ನಿರಂತರ ಕಾರ್ಯಕ್ರಮಗಳೊಂದಿಗೆ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಘದ ಬೆಳವಣಿಗೆಗೆ ನಾವು ಕೈಜೋಡಿಸುತ್ತೇವೆಂದರು.



ವಾಸವಿ ಮಹಿಳಾ ಸಂಘದ ಅಧ್ಯಕ್ಷೆ ಜ್ಯೋತಿನಾಗರಾಜು ಮಾತನಾಡಿ, ಏಡುಕೊಂಡಲಸ್ವಾಮಿ ಪೂಜಾ ಕಾರ್ಯ ವಿಶೇಷತೆಯಿಂದ ಕೂಡಿದೆ. ಎಲ್ಲರಲ್ಲೂ ಭಕ್ತಿಯ ಜಾಗೃತಿ ಮೂಡಿಸುವ ಕಾರ್ಯ ನಿರಂತರ ನಡೆಯುತ್ತಾ ಬಂದಿದೆ. ಪ್ರತಿವರ್ಷವೂ ಸಹ ನಮ್ಮ ಮಹಿಳಾ ಸಂಘದ ವತಿಯಿಂದ ಇಂತಹ ಪೂಜಾ ಕಾರ್ಯಕ್ರಮಗಳನ್ನು ತಪ್ಪದೆ ಆಯೋಜನೆ ಮಾಡುತ್ತಾ ಬಂದಿದ್ದೇವೆ. ಮುಂದಿನ ದಿನಗಳಲ್ಲೂ ಸಹ ಮಹಿಳಾ ಸಂಘ ಕೈಗೊಳ್ಳುವ ಎಲ್ಲಾ ಕಾರ್ಯಕ್ರಮಗಳಿಗೆ ಮಹಿಳೆಯರೂ ಹಾಗೂ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರೋತ್ಸಾಹಿಸಬೇಕು. ಇಂದು ನಡೆದ ಏಡುಕೊಂಡಲಸ್ವಾಮಿಯ ಪೂಜಾ ಕಾರ್ಯಕ್ರಮದಲ್ಲಿ ನೀಲಾದ್ರಿ, ಶೇಷಾದ್ರಿ, ನಾರಾಯಾದ್ರಿ, ಗರುಡಾದ್ರಿ, ವೆಂಕಟಾದ್ರಿ ಬೆಟ್ಟಗಳ ನಡುವೆ ಏಡುಕೊಂಡಲ ಸ್ವಾಮಿಯನ್ನು ಪ್ರತಿಷ್ಠಾಪಿಸಿ ಸುಮಾರು ನೂರಕ್ಕೂ ಹೆಚ್ಚು ಮಹಿಳೆಯರಿಂದ ಪೂಜಾ ಕಾರ್ಯ ನಡೆಸಿಕೊಡಲಾಯಿತು ಎಂದರು.

ಮಹಿಳಾ ಸಂಘದ ಉಪಾಧ್ಯಕ್ಷೆ ಅನುಪಮಶ್ರೀನಿವಾಸ್, ಕಾರ್ಯದರ್ಶಿ ಲತಾಭಾಬು,ಖಜಾಂಚಿಸುಮಾಸೋಮಶೇಖರ್, ಆಶಾಮಧು, ಪುರೋಹಿತ ಕುಮಾರಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಎಆರ್‌ಎಸ್‌ಐ ಸಸ್ಪೆಂಡ್‌ಗೆ ಒತ್ತಾಯಿಸಿ ಎಸ್ಪಿಗೆ ಮನವಿ



» ಚಿತ್ರದುರ್ಗ

ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಸಹಾಯಕ ಸಬ್‌ಇನ್ಸ್‌ಪೆಕ್ಟರ್ ಜಿ.ಎಸ್.ವೆಂಕಟಚಲ ತನ್ನ ಕರ್ತವ್ಯವನ್ನು ಸರಿಯಾಗಿ ನಿಭಾಯಿಸುವ ಬದಲು ಚಿತ್ರದುರ್ಗದ ನೂತನ ಶಾಸಕ ಕೆ.ಸಿ.ವೀರೇಂದ್ರಪಪ್ಪಿಯ ಅಂಗರಕ್ಷಕನೆಂದು ಹೇಳಿಕೊಂಡು ಸಾರ್ವಜನಿಕರು ಮತ್ತು ವಿವಿಧ ಸಂಘಟನೆಗಳ ಮೇಲೆ ದಬ್ಬಾಳಿಕೆ ನಡೆಸುತ್ತಿರುವುದನ್ನು ವಿರೋಧಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾ ರಕ್ಷಣಾಧಿಕಾರಿಗೆ ಬುಧವಾರ ಮನವಿ ಸಲ್ಲಿಸಲಾಯಿತು.

ಜಿ.ಎಸ್.ವೆಂಕಟಚಲನ ದಬ್ಬಾಳಿಕೆಗೆ ಪತ್ರಿಕೆ ಮತ್ತು ಸಾಮಾಜಿಕ ಜಾಲತಾಣಗಳಲ್ಲಿನ ಫೋಟೋ ವೀಡಿಯೋಗಳೆ ಸಾಕ್ಷಿ. ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಂಗಳವಾರ ನಗರದಲ್ಲಿ ಡಿವೈಡರ್‌ಗಳನ್ನು ವೀಕ್ಷಿಸುತ್ತಿದ್ದ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸುತ್ತಿದ್ದ ವೇಳೆ ರಾಜಕಾಲುವೆಗಳನ್ನು ತೆರವುಗೊಳಿಸುವಂತೆ ಹಾಗೂ ಶಂಕರ್ ಚಿತ್ರಮಂದಿರದ ಮುಂಭಾಗ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗುವಂತೆ ಡಿವೈಡರ್ ಹೊಡೆಯುವಂತೆ ಕರುನಾಡ ವಿಜಯಸೇನೆ ಮನವಿ ಸಲ್ಲಿಸುತ್ತಿದ್ದಾಗ ಶಾಸಕರ ಜೊತೆಗಿದ್ದ ಎ.ಆರ್.ಎಸ್.ಐ. ಜಿ.ಎಸ್.ವೆಂಕಟಚಲ ಮಧ್ಯಪ್ರವೇಶಿಸಿ ಅಸಭ್ಯವಾಗಿ ವರ್ತಿಸಿರುವುದು ನಮ್ಮ ಸಂಘಟನೆಗೆ ಅವಮಾನವಾಗಿದೆ. ಹಾಗಾಗಿ ಕೂಡಲೆ ಸೇವೆಯಿಂದ ಅಮಾನತ್ತುಗೊಳಿಸಬೇಕು. ಇಲ್ಲವಾದಲ್ಲಿ ಜಿಲ್ಲಾ ಪೊಲೀಸ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಜಗದೀಶ್, ವಿಶ್ವನಾಥ್, ಮಣಿಕಂಠ, ಪ್ರದೀಪ್ ಆರ್. ಅವಿನಾಶ್, ನಾಗರಾಜ್‌ಮುತ್ತು, ಅಖಿಲೇಶ್ ಈ ಸಂದರ್ಭದಲ್ಲಿ ಹಾಜರಿದ್ದರು.

## ಪ್ರಮುಖ ಸುದ್ದಿ

# ವಿಡಿಯೋ ಚಿತ್ರೀಕರಣ ವಿರುದ್ಧ ಮಹಿಳಾ ಬಿಜೆಪಿ ಪ್ರತಿಭಟನೆ

» ಚಿತ್ರದುರ್ಗ

ಶೌಚಕ್ರಿಯೆ ಮಾಡುವಂತ ಖಾಸಗಿ ಜಾಗದಲ್ಲಿ ವಿಡಿಯೋ ಚಿತ್ರೀಕರಣ ಮಾಡುವಂತ ಹೇಯ ಕೃತ್ಯದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಒಳಗಾಗದೆ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಕ್ರಮ ತೆಗೆದುಕೊಂಡು ಇದರ ಹಿಂದಿರುವಂತ ಷಡ್ಯಂತ್ರವನ್ನು ಬಯಲಿಗೆಳೆಯಬೇಕು ಎಂದು ಆಗ್ರಹಿಸಿ ಬಿಜೆಪಿ ಮಹಿಳಾ ಮೋರ್ಚಾ ಇಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆಯನ್ನು ನಡೆಸಿತು.



ಈ ಬಗ್ಗೆ ಮಾತನಾಡಿದ ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯೆ ಮತ್ತು ಜಿಲ್ಲಾ ಕಾರ್ಯದರ್ಶಿ ಶ್ರೀಮತಿ ಎ. ರೇಖಾ ರಾಜ್ಯ ಸರ್ಕಾರ ಒಂದು ಜನಾಂಗದ ಪರವಾಗಿ ಕೆಲಸವನ್ನು ಮಾಡುತ್ತಿದೆ, ಅವರ ಓಲೈಕೆಯನ್ನು ಮಾಡುವ ಕೆಲಸಕ್ಕೆ ಮುಂದಾಗಿದೆ, ಅವರಿಂದಲೇ ನಾವು ಎನ್ನುವಂತಾಗಿದೆ. ಬೇರೆ ಜನಾಂಗದವರನ್ನು ಸರಿಯಾದ ರೀತಿಯಲ್ಲಿ ಕಾಣುತ್ತಿಲ್ಲ ಗ್ಯಾರೆಂಟಿ ಕಾರ್ಡನೊಂದಿಗೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಿಯಾದ ರೀತಿಯಲ್ಲಿ ಆಡಳಿತವನ್ನು ನಡೆಸುತ್ತಿಲ್ಲ ಇವರ ಆಧಿಕಾರದಲ್ಲಿ ಶಾಲೆಗೆ ವಿದ್ಯಾರ್ಥಿನಿಯರು ಹೋಗಲು ಹೆದರುತ್ತಿದ್ದಾರೆ, ಇಲ್ಲಿ ಅನ್ಯಾಯ ನಡೆಯುತ್ತಿದೆ ಅವರನ್ನು ಬಂಧಿಸಿ ಎಂದು ದೂರು ನೀಡಲು ಹೋದರೆ ಅವರನ್ನೇ ತೆಗಳುವ ಕೆಲಸವನ್ನು ಮಾಡಲಾಗುತ್ತಿದೆ ಎಂದು ದೂರಿದರು. ಈಗಾಗಲೇ ರಾಜ್ಯಾದ್ಯಂತ ಸಾಮಾಜಿಕ ಜಾಲತಾಣಗಳಲ್ಲಿ ಉಡುಪಿಯ ನೇತ್ರ ಜ್ಯೋತಿ ಕಾಲೇಜಿನಲ್ಲಿ ಹಿಂದೂ ಯುವತಿ ಯರು ಶೌಚಾಲಯವನ್ನು ಬಳಸುವ ವೀಡಿಯೋವನ್ನು ಮುಸ್ಲಿಂ ಯುವತಿಯರು ತಮ್ಮಕೋಮಿನವರೊಂದಿಗೆಹಂಚಿಕೊಂಡು ಹಿಂದೂ ವಿದ್ಯಾರ್ಥಿನಿಯರನ್ನು ದಾರಿ ತಪ್ಪಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಈಗಾಗಲೇ ಮಾಧ್ಯಮಗಳಲ್ಲಿ ಬಂದಂತೆ ತಮಾಷೆಗಾಗಿ ಶೌಚಾಲಯದಲ್ಲಿ ವಿಡಿಯೋ ಚಿತ್ರೀಕರಣ ಮಾಡಿದ್ದೇವೆ ಎಂಬುದು ತೀರ ಬಾಲಿಷ ಹಾಗೂ ಪ್ರಕರಣವನ್ನು ದಾರಿ ತಪ್ಪಿಸುವ ಹೇಳಿಕೆ ಶೌಚ ಕ್ರಿಯೆ ಮಾಡುವಂತ ಖಾಸಗಿ ಜಾಗದಲ್ಲಿ ವಿಡಿಯೋ ಚಿತ್ರೀಕರಣ ಮಾಡುವಂತ ಹೇಯ ಕೃತ್ಯದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಒಳಗಾಗದೆ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಕ್ರಮ ತೆಗೆದುಕೊಂಡು ಇದರ ಹಿಂದಿರುವಂತ ಷಡ್ಯಂತ್ರವನ್ನು ಬಯಲಿಗೆಳೆಯಬೇಕು ಎಂದು ಒತ್ತಾಯಿಸಿದ್ದಾರೆ.

ಈ ಪ್ರಕರಣವನ್ನು ಎಲ್ಲಾ ಮಹಿಳೆಯರು ಖಂಡಿಸಬೇಕಿದೆ ಈ ರೀತಿಐಆದ ಪ್ರಕರಣ ಬೇರೆ ಕಡೆಯಲ್ಲಿ ನಡೆಯುವುದಕ್ಕೆ ಬಿಡಬಾರದು ಇದರ ಬಗ್ಗೆ ಸರ್ಕಾರದಲ್ಲಿ ವಿಚಾರ ಮಾಡಿದರೆ ಉಡಾಫೆ ಉತ್ತರವನ್ನು ನೀಡಲಾಗುತ್ತಿದೆ. ಈ ಕುರಿತು ಜಿಲ್ಲಾಡಳಿತ ಸೂಕ್ತ ರೀತಿಯ ತನಿಖೆಯನ್ನು ನಡೆಸಿ ತಪ್ಪಿತಸ್ಥರ ಮೇಲೆ ಕಾನೂನಾತ್ಮಕ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಆಗ್ರಹಿಸಲಾಯಿತು. ಈ ಪ್ರತಿಭಟನೆಯಲ್ಲಿ ಜಿಲ್ಲಾ ಮಹಿಳಾ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಶಾಂತಮ್ಮ ಜಗದಾಂಬ, ಎಸ್.ಸಿ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಭಾರ್ಗವಿ, ನಗರ ಮತ್ತು ಗ್ರಾಮಾಂತರ ಜಿಲ್ಲಾ ಮಂಡಲ ಅದ್ಯಕ್ಷ ವೀಣಾ, ಶೀಲ, ರೈತ ಮೋರ್ಚಾ ಕಾರ್ಯದರ್ಶಿಗಳಾದ ಕಾಂಚನ, ವೀಣಾ ಮಂಡಲ ಅಧ್ಯಕ್ಷರಾದ ಲಕ್ಷ್ಮೀ ಸಿದ್ದಮ್ಮ, ತಾಹಿರಾ ಬಾನು ವನಜ ಮಂಜುಳ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬೇಡ ಜಂಗಮ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಜಿಲ್ಲಾ ಬೇಡ ಜಂಗಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸುವುದಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2022-23 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ.ಯಲ್ಲಿ ಶೇ.90 ಕ್ಕಂತ ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ. 85 ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಜಿಲ್ಲಾ ಬೇಡ ಜಂಗಮ ಸಮಾಜದ ವಿದ್ಯಾರ್ಥಿಗಳು ಅಂಕಪಟ್ಟಿ ನಕಲು, ಜಾತಿ ಪ್ರಮಾಣ ಪತ್ರ, ಎರಡು ಪಾಸ್‌ಪೋರ್ಟ್ ಸೈಜ್ ಫೋಟೋಗಳೊಂದಿಗೆ ಆಗಸ್ಟ್ 10 ರೊಳಗೆ ಅಧ್ಯಕ್ಷರು, ಜಿಲ್ಲಾ ಬೇಡ ಜಂಗಮ ಸಂಸ್ಥೆ, ಜೆ.ಸಿ.ಆರ್.ಸರ್ಕಲ್, ಸೆಂಟ್ರಲ್ ಬ್ಯಾಂಕ್ ಬಿಲ್ಡಿಂಗ್, 1 ನೇ ಮಹಡಿ, ಚಿತ್ರದುರ್ಗ-577501 ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಬೇಡ ಜಂಗಮ ಸಮಾಜದ ಪ್ರಧಾನ ಕಾರ್ಯದರ್ಶಿ ಎಸ್.ಷಡಾಕ್ಷರಯ್ಯ ಮನವಿ ಮಾಡಿದ್ದಾರೆ. ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ರ್‍ಯಾಂಕ್ ವಿಜೇತರು ಹಾಗೂಅತ್ಯುನ್ನತಶ್ರೇಣಿಯಲ್ಲಿತೇರ್ಗಡೆಯಾದವರು ಡಾಕ್ಟರೇಟ್ ಪಡೆದವರನ್ನು ಪ್ರತಿಭಾ ಪುರಸ್ಕಾರದಲ್ಲಿ ಸನ್ಮಾನಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ : 9845436999, 9449681797 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

### ಮಳೆಗಾಲದಲ್ಲಿ ಕಾಡುವ ಶೀತ ಜ್ವರಕ್ಕೆ ಮನೆಯೇ ಮದ್ದು: ದೇವರಾಜ ಪಟಗೆ



» **ದಾವಣಗೆರೆ**

ಮಳೆಗಾಲದಲ್ಲಿ ಶೀತ, ಜ್ವರ, ಕೆಮ್ಮು ಬರುವುದು ಸಾಮಾನ್ಯವಾಗಿದ್ದು ಜನರು ಮನೆಮದ್ದನ್ನೆ ಬಳಸಿ ಗುಣಪಡಿಸಿಕೊಳ್ಳಬಹುದು ಎಂದು ದಾವಣಗೆರೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ ಪಿ. ಪಟಗೆ ತಿಳಿಸಿದರು.ಗುರುವಾರ ದಾವಣಗೆರೆ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ವಸತಿ ನಿಲಯ ಪಾಲಕರಿಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ತರಬೇತಿ ಕಾರ್ಯಾಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು.ಆರೋಗ್ಯಇಲಾಖೆಯಿಂದ ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿದ್ದು ಈಗ ಮಳೆಗಾಲವಾಗಿರುವುದರಿಂದ ಶೀತ ಜ್ವರ, ಕೆಮ್ಮಿನ ಪ್ರಕರಣಗಳೂ ಹೆಚ್ಚಾಗುತ್ತಿವೆ. ಹಾಗೂ ಮುದ್ರಾಸ್ ಐ ಪ್ರಕರಣಗಳೂ ಬಹಳ ಕಂಡು ಬರುತ್ತಿದ್ದು ಜನರು ಭಯ ಪಡಬೇಕಾಗಿಲ್ಲ ಎಂದರು. ತಾಲ್ಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹೆಚ್. ಉಮಾಪತಿ, ಡಾ. ಸ್ನೇಹಾ ಪಿ ನಾಯ್ಕ್, ಹಾಲಸ್ವಾಮಿ .ಎನ್.ಸಿ, ತಂಬಾಕು ನಿಯಂತ್ರಣಾಘಟಕದ ದೇವರಾಜ ಉಪಸ್ಥಿತರಿದ್ದರು.

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 16 ಅರ್ಜಿ ಸಲ್ಲಿಸಲು ಕೊನೆಯ ದಿನ. 2023-24ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್.ಸಿ, ಎಸ್.ಟಿ ರೂ.2.50 ಲಕ್ಷ ಒಳಗಿರಬೇಕು. ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ.1 ಲಕ್ಷ ಒಳಗಿರಬೇಕು. ವಿದ್ಯಾರ್ಥಿಗಳು https://shp.karnataka.gov.inವೆಬ್‌ಸೈಟ್‌ನ್ನುಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದು, ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಅದೇಶಕ್ಕಾಗಿ ಇಲಾಖೆಯ https://bcwd.karnataka.gov.in ವೆಬ್‌ಸೈಟ್‌ಯನ್ನು ಸಂಪರ್ಕಿಸಬಹುದು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ವೆಬ್‌ಸೈಟ್‌ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ ಮತ್ತು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ

# ಮಾನವ ಕಳ್ಳ ಸಾಗಾಣಿಕೆ ದೊಡ್ಡ ಸಾಮಾಜಿಕ ಪಿಡುಗು: ಜಿಲ್ಲಾ ನ್ಯಾಯಾಧೀಶೆ ಮನಗೂಳಿ ಪ್ರೇಮಾವತಿ.ಎಂ

» **ಚಿತ್ರದುರ್ಗ**



ಪ್ರಸ್ತುತ ಸಮಾಜದಲ್ಲಿ ಮಾನವ ಕಳ್ಳ ಸಾಗಾಣಿಕೆ ದೊಡ್ಡ ಸಾಮಾಜಿಕ ಪಿಡುಗಾಗಿ ಪರಿಣಮಿಸಿದೆ. ಮಕ್ಕಳು, ಯುವತಿಯರು ಹಾಗೂ ಹೆಣ್ಣು ಮಕ್ಕಳನ್ನು ಬಲಿಪಶು ಮಾಡಿ, ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಮನಗೂಳಿ ಪ್ರೇಮಾವತಿ ಎಂ ಕಳವಳ ವ್ಯಕ್ತ ಪಡಿಸಿದರು.

ಜಿಲ್ಲಾ ಕಾನೂನೂ ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಸಮಾಜ ಕಲ್ಯಾಣ, ಆರೋಗ್ಯ, ಶಿಕ್ಷಣ ಹಾಗೂ ಕಾರ್ಮಿಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ವಕೀಲರ ಸಂಘದ ಸಹಯೋಗದಲ್ಲಿ, ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ಮಾನವ ಕಳ್ಳ ಸಾಗಣಿಕೆ ತಡೆ ಕುರಿತಾದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಈ ಹಿಂದೆ ಸಿನಿಮಾಗಳಲ್ಲಿ ವಜ್ರ, ಚಿನ್ನವನ್ನು ಕಳ್ಳಸಾಗಣಿಕೆ ಮಾಡುವುದು, ಪೊಲೀಸರು ಅವರನ್ನು ಹಿಡಿದು ಮಟ್ಟ ಹಾಕುವುದನ್ನು ನೋಡುತ್ತಿದ್ದವು. ಆದರೆ ಇಂದು ಮಾನವ ಕಳ್ಳ ಸಾಗಾಣಿಕೆ ಗಂಭೀರ ವಿಷಯವಾಗಿದೆ. ಮಕ್ಕಳನ್ನು ಅಪಹರಿಸಿ ಅಪರಾಧ ಚಟುವಟಿಕೆಗಳಲ್ಲಿ ಬಳಸಿಕೊಳ್ಳಲಾಗುತ್ತಿದೆ. 18 ವರ್ಷದ ಒಳಗಾಗಿರುವ ಯುವತಿಯರಿಗೆ ಆಮಿಷವೊಡ್ಡಿ, ಅಕ್ರಮ ಚಟುವಟಿಕೆಗಳಿಗೆ ತಳ್ಳುವ ಸಂಭವ ಇದೆ. ಮಾನವ ಕಳ್ಳ ಸಾಗಾಣಿಕೆ ಮೂಲಕ ಸಣ್ಣ ಮಕ್ಕಳನ್ನು ಭಿಕ್ಷಾಟನೆಗೆ, ಅಂಗಾಗಗಳ ಮಾರಾಟದ ಜಾಲಗಳಿಗೆ ತಳ್ಳಾಗುತ್ತಿದೆ ಎಂದು ಹೇಳಿದರು.

ಮಾನವ ಕಳ್ಳ ಸಾಗಾಣಿಕೆ ತಡೆಯ ಕಾರ್ಯಪಡೆಯಲ್ಲಿ ಕರ್ತವ್ಯ ನಿರ್ವಹಸುತ್ತಿರುವ ಪ್ರತಿಯೊಬ್ಬರು ಜಾಗರೂಕರಾಗಿದ್ದು, ಈ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಪ್ರಯತ್ನಿಸಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರಚಿಸಿರುವ ಹಲವು ಕಾನೂನು ಹಾಗೂ ಕಾಯ್ದೆಗಳನ್ನು ಬಳಸಿ ಮಾನವ ಕಳ್ಳ ಸಾಗಾಣಿಕೆಗೆ ತುತ್ತಾದವರ ಹಕ್ಕುಗಳನ್ನು ರಕ್ಷಿಸಿ, ಸೂಕ್ತ ನೆರವು ನೀಡಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಮಾತನಾಡಿ, ವಿಶ್ವ ಸಂಸ್ಥೆ ಲೈಂಗಿಕ, ಕಾರ್ಮಿಕ ದೌರ್ಜನ್ಯ ಹಾಗೂ ಅಂಗಾಗಳ ಮಾರಾಟದ ಅಪರಾಧಗಳಿಗೆ ಮಾನವ ಕಳ್ಳ ಸಾಗಾಣಿಕಯೇ ಮೂಲ ಕಾರಣ ಎಂದು ವರದಿಯಲ್ಲಿ ತಿಳಿಸಿದೆ. ಚಿಕಿತ್ಸೆ ನೀಡುವುದಕ್ಕಿಂತ ರೋಗ ಬರದಂತೆ ತಡೆಯುವುದೇ ಉತ್ತಮ ಮಾರ್ಗವಾಗಿದೆ. ಇದರಂತೆ ಮಾನವ ಕಳ್ಳ ಸಾಗಣಿಕೆ ನಡೆಯದಂತೆ ಜಾಗೃತಿ ವಹಿದ್ದು, ಜಿಲ್ಲಾ ಮಟ್ಟದ ಕಾರ್ಯಪಡೆಯ ಕೆಲಸ ಮಾಡಬೇಕು. ಜಿಲ್ಲೆಯಲ್ಲಿ ಯಾವುದೇ ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳು ದಾಖಲಾಗದಿರುವುದು ಉತ್ತಮ ಅಂಶವಾಗಿದೆ ಎಂದರು.

ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಕೆ.ಟಿ.ತಿಪ್ಪೇಸ್ವಾಮಿ ಮಾತನಾಡಿ, ಮಾನವ ಕಳ್ಳ ಸಾಗಾಣಿಕೆ ಅತಿ ದೊಡ್ಡ ಸವಾಲು ಆಗಿದೆ. ರಾಜ್ಯದಲ್ಲಿ ಕಳೆದ ಐದು ವರ್ಷದಲ್ಲಿ 27,000 ಮಕ್ಕಳು ಕಾಣೆಯಾದ ಬಗ್ಗೆ ಪ್ರಕರಣಗಳು ದಾಖಲಾಗಿವೆ. ಭಾರತದಲ್ಲಿ ಕರ್ನಾಟಕ ರಾಜ್ಯ 3ನೇ ಸ್ಥಾನದಲ್ಲಿರುವುದು, ನಮ್ಮೆಲ್ಲರನ್ನು ಆಘಾತಕ್ಕೆ ಈಡು ಮಾಡಿದೆ ಎಂದು ಬೇಸರ ವ್ಯಕ್ತ ಪಡಿಸಿದರು.ರಾಜ್ಯದ ಪ್ರತಿಷ್ಠಿತ ಪತ್ರಿಕೆಗಳಲ್ಲಿ ತಿಪಟೂರಿನ ಕೊಬ್ಬರಿ ಕಾರ್ಖಾನೆಗಳಲ್ಲಿ ಮಕ್ಕಳನ್ನು ದುಡಿತಕ್ಕೆ ಇಟ್ಟುಕೊಂಡ ಕುರಿತು ವರದಿಗಳು ಪ್ರಕಟವಾಗಿದ್ದವು. ಇದನ್ನು ಆದರಿಸಿ,ಆಯೋಗ ಕೊಬ್ಬರಿ ಕಾರ್ಖಾನೆಗಳ ಮೇಲೆ ದಾಳಿ ನಡೆಸಿ 68 ಮಕ್ಕಳನ್ನು ರಕ್ಷಿಸಿ, ಮಕ್ಕಳ ರಕ್ಷಣಾ ಘಟಕ್ಕೆ ನೀಡಲಾಗಿದೆ. ಬೇರೆ ರಾಜ್ಯಗಳಿಂದ ಈ ಕಾರ್ಖಾನೆಗಳಲ್ಲಿ ಕೆಲಸ ಮಾಡಲು ಹೆಣ್ಣುಮಕ್ಕಳು ಸಹ ಬಂದಿದ್ದಾರೆ. ಇವರಿಗೆ ಯಾವುದೇ ಮೂಲಭೂತ ಸೌಕರ್ಯಗಳನ್ನು ನೀಡಿದೆ, ಕನಿಷ್ಠ ವೇತನವನ್ನು ಸಹ ಕೊಡದೆ ದುಡಿಕೊಳ್ಳಲಾಗುತ್ತಿದೆ. ಈ ಅಂಶಗಳನ್ನು ಗಮನಿಸಿ, ಮಾನವ ಹಕ್ಕು ಹಾಗೂ ಮಹಿಳಾ ಆಯೋಗಗಳು ಪ್ರಕರಣ ದಾಖಲಿಸುವಂತೆ ತಿಳಿಸಲಾಯಿತು. ಮಾನವ ಕಳ್ಳ ಸಾಗಾಣಿಕೆ ತಡೆಯಲು ಗ್ರಾಮ ಮಟ್ಟದಲ್ಲಿ ಮಹಿಳಾ ಮತ್ತು ಮಕ್ಕಳ ಕಾವಲು ಸಮಿತಿಗಳನ್ನು ಸ್ಥಾಪಿಸಲಾಗಿದೆ. ಆದರೆ ರಾಜ್ಯದ ಬಹುತೇಕ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಈ ಕುರಿತು ಮಾಹಿತಿ ಇಲ್ಲ. ಈ ಕಾವಲು ಸಮಿತಿ ಪ್ರತಿ ಮೂರು ತಿಂಗಳಿಗೆ ಒಮ್ಮೆ ಸಭೆ ನಡೆಸಿ, ನಡಾವಳಿಗಳನ್ನು ದಾಖಲಿಸಬೇಕು ಎಂದರು. ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಪರುಶುರಾಮ್, ಇತಿಹಾಸದ ಉದ್ದಕ್ಕೂ ಬೇರೆ ಬೇರೆ ಕಾರಣಗಳಿಗೆ ದೌರ್ಜನ್ಯ ನಡೆದ ಘಟನೆಗಳು ಇವೆ. ಪ್ರಸ್ತುತ ಮಾನವ ಕಳ್ಳ ಸಾಗಾಣಿಕೆ ರೂಪದಲ್ಲಿ ಈ ದೌರ್ಜನ್ಯ ಮುಂದುವರೆದಿದ್ದು, ಮಕ್ಕಳು ಹಾಗೂ ಮಹಿಳೆಯರ ಬಲಿ ಪಶು ಆಗುತ್ತಿರುವುದು ದುರ್ದೈವದ ಸಂಗತಿಯಾಗಿದೆ. ಇದನ್ನು ತಡೆಗಟ್ಟಲು ಜಿಲ್ಲಾ ಮಟ್ಟದ ಕಾರ್ಯಪಡೆಗಳ ಎಲ್ಲಾ ಇಲಾಖೆಗಳು ಪರಸ್ಪರ ಸಹಕಾರ ನೀಡಬೇಕು. ಆಗ ಮಾತ್ರ ಇದನ್ನು ತಡೆಗಟ್ಟಲು ಯಶಸ್ವಿಯಾಗಲಿದ್ದೇವೆ ಎಂದರು.

ಕಾರ್ಯಗಾರದಲ್ಲಿ ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕ ಬಾಲಚಂದ್ರ ನಾಯ್ಕ್ ಉಪನ್ಯಾಸ ನೀಡಿದರು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಆರ್.ಪ್ರಭಾಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ರಂಗನಾಥ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ.ಸಿ, ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಜವಾಹರ್ ನವೋದಯ ವಿದ್ಯಾಲಯ: ಅಂತರ ಜಿಲ್ಲಾ ವಿಭಾಗೀಯ ಕ್ರೀಡಾಕೂಟಕ್ಕೆ ಚಾಲನೆ



» **ಚಿತ್ರದುರ್ಗ**

ಹಿರಿಯೂರಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯಲ್ಲಿ ಎರಡು ದಿನಗಳ ಕಾಲ ನಡೆಯುವ ನವೋದಯ ವಿದ್ಯಾಲಯ ಸಮಿತಿ ಹೈದರಬಾದ್ ವಲಯದ ಅಂತರ ಜಿಲ್ಲಾ ವಿಭಾಗೀಯ ಕ್ರೀಡಾಕೂಟಕ್ಕೆ ಗುರುವಾರ ಚಾಲನೆ ನೀಡಲಾಯಿತು.

ಅಂತರ ಜಿಲ್ಲಾ ವಿಭಾಗೀಯ ಕ್ರೀಡಾಕೂಟಕ್ಕೆ ಚಿತ್ರದುರ್ಗ, ಚಿಕ್ಕಮಗಳೂರು, ಉಡುಪಿ, ಹಾವೇರಿ, ಧಾರಾವಾಡ, ದಾವಣಗೆರೆ, ಬೆಳಗಾವಿ, ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಶಿವಮೊಗ್ಗ ವಿದ್ಯಾಲಯ ಸೇರಿದಂತೆ ಒಟ್ಟು 10 ಜಿಲ್ಲೆಯ ನವೋದಯ ವಿದ್ಯಾಲಯಗಳ 200 ಬಾಲಕರು, 168 ಬಾಲಕಿಯರು ಮತ್ತು 24 ಜನ ಶಿಕ್ಷಕರು ಮತ್ತು ಶಿಕ್ಷಕಿಯರು ಭಾಗವಹಿಸಿದ್ದರು.

ಈ ಕ್ರೀಡಾಕೂಟದಲ್ಲಿ ಕಬ್ಬಡಿ, ಖೋ-ಖೋ, ಯೋಗ, ಚೆಸ್, ಬ್ಯಾಟ್‌ಮಿಟನ್ ಮತ್ತು ಟೇಬಲ್ ಟೆನ್ನಿಸ್ ಪಂದ್ಯಾವಳಿಗಳನ್ನು ಹಮ್ಮಿಕೊಳ್ಳಲಾಗಿದ್ದು. ಈ ಪಂದ್ಯಾವಳಿಯಲ್ಲಿ



ಅಯ್ಕೆಯಾದ ಕ್ರೀಡಾಪಟುಗಳನ್ನು ಪ್ರಾದೇಶಿಕ ಮತ್ತು ರಾಷ್ಟ್ರೀಯ ಮಟ್ಟಕ್ಕೆ ಕಳುಹಿಸಲಾಗುವುದು. ಈ ಮಕ್ಕಳಿಗೆ ಕ್ರೀಡೆಯಲ್ಲಿ ಉತ್ತಮ ಭವಿಷ್ಯ ಲಭಿಸುವುದು.

ಹಿರಿಯೂರಿನ ಪವರ್ ಗ್ರಿಡ್ ಜನರಲ್ ಮ್ಯಾನೇಜರ್ ಹರೀಶ್ ಕುಮಾರ್ ನಾಯರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಹಿರಿಯೂರಿನ ಪವರ್ ಗ್ರಿಡ್ ಜನರಲ್ ಮ್ಯಾನೇಜರ್ ಹರೀಶ್ ಕುಮಾರ್ ನಾಯರ್, ಮಕ್ಕಳಿಗೆ ಶಿಕ್ಷಣದ ಜೊತೆಗೆ ಶಿಸ್ತು, ಸಮಯ ಪ್ರಜ್ಞೆ, ಗುರು ಹಿರಿಯರಿಗೆ ಗೌರವ, ಶಾರೀರಿಕ ಶಿಕ್ಷಣದ ಮಹತ್ವ ಮತ್ತು ನವೋದಯ ವಿದ್ಯಾಲಯದ ಮಹತ್ವದ ಬಗ್ಗೆ ಹಿತ ವಚನ ನೀಡಿದರು.

ನವೋದಯ ವಿದ್ಯಾಲಯದ ಮಕ್ಕಳ ಪಥ ಸಂಚಲನ, ಮಕ್ಕಳ ಶಿಸ್ತು, ಮಕ್ಕಳ ವಿವಿಧ ಚಟುವಟಿಕೆಗಳನ್ನು ಮನತುಂಬಿ ಹೊಗಳಿದರು.

ಹಿರಿಯೂರಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯ ಪ್ರಾಚಾರ್ಯ ಡ್ಯಾನಿಯಲ್ ರತನ್ ಕುಮಾರ್ ಅವರ ಪೂರ್ವ ಯೋಜನೆ ಮತ್ತು ಮಾರ್ಗದರ್ಶನ ಹಾಗೂ ಶಿಕ್ಷಕರ ಪ್ರೋತ್ಸಾಹದೊಂದಿಗೆ ವಿಭಾಗೀಯ ಕ್ರೀಡಾಕೂಟವನ್ನು ಸುಗಮವಾಗಿ ಆಯೋಜಿಸಲಾಯಿತು.

### ಸಂಚಾರಿ ನಿಯಮ ಪಾಲಿಸದಿದ್ದರೆ, ಕೇಸ್ ದಾಖಲು: ಪಿಎಸ್‌ಐ ಭೀಮನಗೌಡ ಪಾಟೀಲ



» **ಹೊಸದುರ್ಗ**

ಪಟ್ಟಣದಲ್ಲಿ ಕೆಲವು ಆಟೋ ಚಾಲಕರು ಸಂಚಾರಿ ನಿಯಮ ಪಾಲಿಸದೇ,ಎಲ್ಲಿಬೇಕೆಂದರಲ್ಲಿ ತಮ್ಮ ಆಟೋಗಳನ್ನು ಅಡ್ಡಾದಿಡ್ಡಿಯಾಗಿ ನಿಲ್ಲಿಸುತ್ತಿರುವುದು. ಅಲ್ಲದೇ, ನಿಗದಿತ ಜನರಿಗೆ ಹೆಚ್ಚು ಜನರನ್ನು ತುಂಬಿಕೊಂಡು ಹೋಗುತ್ತಿರುವುದು ಕಂಡು ಬರುತ್ತಿದೆ. ಈ ವರ್ತನೆ ಹೀಗೆಯೇ ಮುಂದುವರೆದರೆ, ಕೇಸ್ ದಾಖಲಿಸಲಾಗುವುದು ಎಂದು ಆಟೋ ಚಾಲಕರಿಗೆ ಹೊಸದುರ್ಗ ಪೊಲೀಸ್ ಠಾಣೆ ಪಿಎಸ್‌ಐ ಭೀಮನ ಗೌಡ ಪಾಟೀಲ ಎಚ್ಚರಿಸಿದರು. ಪಟ್ಟಣದ ಮುಖ್ಯರಸ್ತೆ ಹಾಗೂ ಪ್ರಮುಖ ರಸ್ತೆಗಳಲ್ಲಿ ಗುರುವಾರ ಸಂಚಾರಿ ನಿಯಮ ಉಲ್ಲಂಘಿಸಿ ಆಟೋ ನಿಲ್ಲಿಸಿಕೊಂಡಿದ್ದ 40 ಕ್ಕೂ ಹೆಚ್ಚು ಚಾಲಕರಿಗೆ ದಂಡ ವಿಧಿಸಿ, ನಂತರ ಮಾತನಾಡಿದ ಅವರು, ಪಟ್ಟಣದ ಹಲವೆಡೆ ಆಟೋಗಳ ನಿಲುಗಡೆಗೆಂದು ಸ್ಥಳಗಳನ್ನು ಗುರುತಿಸಲಾಗಿದೆ. ಆಟೋ ಚಾಲಕರು ಅದೇ ಸ್ಥಳದಲ್ಲಿ ತಮ್ಮ ಆಟೋಗಳನ್ನು ನಿಲ್ಲಿಸಿಕೊಳ್ಳಬೇಕು. ಎಲ್ಲಿ ಬೇಕೆಂದರಲ್ಲಿ ನಿಲ್ಲಿಸುವುದರಿಂದ ಪಾದಾಚಾರಿಗಳಿಗೆ ಹಾಗೂ ಇತರ ವಾಹನ ಸವಾರರಿಗೆ ತುಂಬಾ ಕಿರಿಕಿರಿ ಉಂಟಾಗುವುದಲ್ಲದೇ, ಟ್ರಾಫಿಕ್ ಜಾಮ್ ಆಗುತ್ತದೆ. ಗ್ರಾಮೀಣ ಭಾಗದಿಂದ ಪಟ್ಟಣಕ್ಕೆ ಬರುವ ಆಟೋ ಚಾಲಕರು ನಿಗದಿತ ಜನರಿಗಿಂತ ಹೆಚ್ಚು ಜನರನ್ನು ತುಂಬುತ್ತಿರುವುದಾಗಿ ದೂರು ಕೇಳಿ ಬಂದಿದೆ. ಇಂತಹ ದೃಶ್ಯಗಳು ಎಲ್ಲಿಯಾದರೂ ಕಂಡುಬಂದರೆ, ಮುಲಾಜಿಲ್ಲದೆ ಅವರ ಮೇಲೆ ಕೇಸ್ ದಾಖಲಿಸಿ ಕಾನೂನು ಕ್ರಮಕ್ಕೆ ಮುಂದಾಗಲಾಗುವುದು ಎಂದು ಹೇಳಿದರು.

### ಯಾವುದೇ ಇಲಾಖೆ ಆಗಲಿ ವರ್ಗಾವಣೆ ನಿಯಮಗಳಂತೆ ಮಾಡಬೇಕು:ಖರ್ಗೆ

**ಬೆಂಗಳೂರು:** ಯಾವುದೇ ಇಲಾಖೆ ಆಗಲಿ ವರ್ಗಾವಣೆ ನಿಯಮಗಳಂತೆ ಮಾಡಬೇಕು. ಎಲ್ಲವೂ ಪಾರದರ್ಶಕವಾಗಿ ನಡೆಯಬೇಕು. ಅವಧಿ ಪೂರ್ವ ವರ್ಗಾವಣೆ ಇದ್ದರೆ ಅದು ಸಿಎಂ ವಿವೇಚನೆಗೆ ಬಿಟ್ಟಿದ್ದು. ಎಲ್ಲರನ್ನು ನಾವು ಸಮಾಧಾನ ಪಡಿಸಲು ಆಗಲ್ಲ. ರೂಲ್ಸ್ ಬ್ರೇಕ್ ಮಾಡಿದರೇ ನೀವೇ ಬಂದು ನಮ್ಮನ್ನು ಕೇಳುತ್ತೀರಿ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

## ಪ್ರಮುಖ ಸುದ್ದಿ

# ಕಣ್ಣಿನ ಉರಿ ಊತಕ್ಕೆ ಭಯ ಬೇಡ: ಟಿಹೆಚ್‌ಒ

» **ಚಿತ್ರದುರ್ಗ**

ಕಣ್ಣಿನ ಉರಿ ಊತಕ್ಕೆ ಭಯಬೇಡ. ಸೂಕ್ತ ಆರೈಕೆಚಿಕಿತ್ಸೆಯಿಂದಗುಣಮುಖವಾಗುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಮುದ್ದಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಗುರುವಾರ ತಾಲ್ಲೂಕು ಆರೋಗ್ಯ ಅಧಿಕಾರಿಗಳ ತಂಡ ಕಣ್ಣಿನ ಉರಿ ಊತ ಪ್ರಕರಣಗಳು ವರದಿಯಾದ ಹಿನ್ನೆಲೆಯಲ್ಲಿ ಭೇಟಿ ನೀಡಿ ಮಾಹಿತಿ ಶಿಕ್ಷಣ ನೀಡಿದರು. ಕೆಲವು ದಿನಗಳಿಂದ ಹವಾಮಾನ ವ್ಯತ್ಯಾಸದಿಂದ ಮತ್ತು ನಿರಂತರವಾಗಿ ಬರುತ್ತಿರುವ ಮಳೆಯಿಂದ ಕಣ್ಣಿನ ಸಮಸ್ಯೆ ಹೆಚ್ಚಾಗುತ್ತಿದ್ದು, ಕೆಲವು ಜನರಲ್ಲಿ ಕಣ್ಣಿನ ಉರಿ ಊತ ಕಂಜೆಂಟಿವ್ವಿಟಿಸ್ ಸಮಸ್ಯೆ ಕಂಡು



ಬರುತ್ತಿರುವ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಸಂಬಂಧಪಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ನೋವು ನಿವಾರಕ ಮಾತ್ರೆ ಮತ್ತು ಕಣ್ಣಿನ ಡ್ರಾಪ್ಸ್ ಚಿಕಿತ್ಸೆ ನೀಡುವುದು ಎಂದರು. ಮೂಗಿನ ಮತ್ತು ಗಂಟಲಿನ ಸೋಂಕು ಇದ್ದಲ್ಲಿ ಅದಕ್ಕೆ ಬೇಕಾದ ಚಿಕಿತ್ಸೆ ನೀಡುವುದು ಸಾಮಾನ್ಯವಾಗಿ ಕಣ್ಣಿನ ಬಿಳಿ ಭಾಗವೋ ಕೆಂಪಾಗುತ್ತದೆ. ಕಣ್ಣುಗಳಲ್ಲಿ ಉರಿ ಮತ್ತು ನೋವು ಇರುತ್ತದೆ. ಕಣ್ಣುಗಳಿಂದ ನಿರಂತರವಾಗಿ ನೀರು ಹೊರ ಬರುತ್ತಿರುತ್ತದೆ. ಕಣ್ಣುಗಳು ಊದಿಕೊಳ್ಳುತ್ತದೆ. ಇಂಥ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬಂದು ಸೂಕ್ತ ಚಿಕಿತ್ಸೆ ಪಡೆಯುವುದು ಎಂದು ಸಲಹೆ ನೀಡಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚಿನ ಜನ ಇರುವ ಪ್ರದೇಶಗಳಿಗೆ ಹೋಗುವುದು ಕಡಿಮೆ ಮಾಡಬೇಕು. ಪದೇ ಪದೇ ಕಣ್ಣುಗಳನ್ನು ಮುಟ್ಟುವುದನ್ನು ಕಡಿಮೆ ಮಾಡಬೇಕು. ಸೋಪ್ನಲ್ಲಿ ಆಗಾಗ ಕೈ ತೊಳೆಯುವುದನ್ನು ಅಭ್ಯಾಸ ಮಾಡಬೇಕು. ಕಣ್ಣಿನ ಉರಿ ಊತ ಬಂದ ವ್ಯಕ್ತಿ ಬೇರೆಯವರ ಜೊತೆ ನಿಕಟ ಸಂಪರ್ಕ ಹೊಂದುವುದನ್ನು ತಪ್ಪಿಸಬೇಕು. ಸೋಂಕಿತ ವ್ಯಕ್ತಿಗಳಿಂದ ಅಂತರ ಕಾಪಾಡಿಕೊಳ್ಳಬೇಕು ಎಂದರು.

ಕ್ಷೇತ್ರಆರೋಗ್ಯಶಿಕ್ಷಣಾಧಿಕಾರಿ ಬಿಮುಗಪ್ಪ ಮಾತನಾಡಿ ಕಣ್ಣಿನ ಡ್ರಾಪ್ಸ್ ಅನ್ನ ಬಳಸುವ ಬಗ್ಗೆ ಔಷಧಿಗಳನ್ನು ನುಂಗುವ ವಿಧಾನದ ಬಗ್ಗೆ ತಿಳಿಸಿದರು ಕಾರ್ಯಕ್ರಮದಲ್ಲಿ ಡಾ. ದುಶಾಂತ್, ಡಾ.ಅಕ್ಷಯ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್ ರಾಮಪ್ಪ ರೇಣುಕಾ ಸ್ವಾಮಿ ಕಿರಣ್ ಕುಮಾರ್ ಆಶಾ ಕಾರ್ಯಕರ್ತೆ ಸಾರ್ವಜನಿಕರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಸೋಂಕಿತ ಪ್ರಕರಣಗಳಿಗೆ ಕಣ್ಣಿನ ಡ್ರಾಪ್ಸ್, ನೋವು ನಿವಾರಕ ಔಷಧಿ ವಿತರಿಸಲಾಯಿತು.

## ಫಾಸ್ಟ್ ನ್ಯೂಸ್

### ಸಿದ್ದರಾಮಯ್ಯ ಸುಳ್ಳು ಹೇಳಿ ಮೋಸ ಮಾಡುವುದರಲ್ಲಿ ನಿಸ್ಸೀಮರು: ಕಾರಜೋಳ

» **ಬೆಂಗಳೂರು**

ಸಿಎಂ ಸಿದ್ದರಾಮಯ್ಯ ದುರುದ್ದೇಶದಿಂದ ಗೊಂದಲ ಉಂಟು ಮಾಡಲು ಕೇಂದ್ರ ಸರ್ಕಾರದ ಮೇಲೆ ಹಾಗೂ ಹಿಂದಿನ ಬಿಜೆಪಿ ಸರ್ಕಾರದ ಮೇಲೆ ಗೂಬೆ ಕೂರಿಸಿದ್ದಾರೆ. ಸಿದ್ದರಾಮಯ್ಯ ಸುಳ್ಳು ಹೇಳಿ ಮೋಸ ಮಾಡುವುದರಲ್ಲಿ ನಿಸ್ಸೀಮರು. ಮೀಸಲಾತಿಗೆ ಅನೇಕ ವರ್ಷಗಳಿಂದ ಹೋರಾಟ ಮಾಡುತ್ತಿದ್ದಾರೆ. ಮೀಸಲಾತಿ ಕೊಡುವುದಾಗಿ ಕಾಂಗ್ರೆಸ್ ಹೇಳಿತ್ತು. ಬಿಜೆಪಿ ಸರ್ಕಾರ ಇದ್ದಾಗ ಸಂಪುಟ ಉಪಸಮಿತಿ ರಚಿಸಿ, ಜನಸಂಖ್ಯೆಗೆ ಅನುಗುಣವಾಗಿ ಒಳಮೀಸಲಾತಿ ಕಲ್ಪಿಸಲು ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿತ್ತು. ಎಸ್ಸಿ ಒಳಮೀಸಲಾತಿ ಕಲ್ಪಿಸಲು ಸಂವಿಧಾನ ತಿದ್ದುಪಡಿಗೆ ಶಿಫಾರಸ್ಸು ಮಾಡಲಾಗಿತ್ತು. ಬಿಜೆಪಿ, ಆರ್‌ಎಸ್‌ಎಸ್ ಸಾಮಾಜಿಕ ನ್ಯಾಯದ ಪರ ಇದೆ. ಸಂವಿಧಾನಬದ್ಧ ಆಡಳಿತ ಮಾಡಿದ್ದೇವೆ. ಸಿದ್ದರಾಮಯ್ಯ ಅವರ ಮಾತಿಗೆ ಯಾರೂ ಕಿವಿಗೊಡಬಾರದು ಎಂದು ಎಸ್ಸಿ ಸಮುದಾಯದ ಒಳಮೀಸಲಾತಿ ವಿಚಾರವಾಗಿ ಗೋವಿಂದ ಕಾರಜೋಳ ಸಿಎಂ ವಿರುದ್ಧ ವಾಗ್ದಾಳಿ ಮಾಡಿದರು.

### ಪರಮೇಶ್ವರ್ ಮಗ ಲಿಂಗ ಬದಲಾಯಿಸಿಕೊಂಡಿದ್ದು ಮಕ್ಕಳಾಟ: ಯಶ್‌ಪಾಲ್

» **ಉಡುಪಿ**

ವಿದ್ಯಾರ್ಥಿನಿಯರ ವಿಡಿಯೋ ಚಿತ್ರೀಕರಣ ಪ್ರಕರಣವನ್ನು ಗೃಹ ಸಚಿವ ಡಾ. ಜಿ ಪರಮೇಶ್ವರ್ ಮಕ್ಕಳಾಟ ಎಂದಿದ್ದಕ್ಕೆ ಶಾಸಕ ಯಶ್‌ಪಾಲ್ ಸುವರ್ಣ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜಿ. ಪರಮೇಶ್ವರ್ ಮಗ ಲಿಂಗ ಬದಲಾಯಿಸಿಕೊಂಡಿದ್ದು ಮಕ್ಕಳಾಟ. ಇಂದು ಕ್ಯಾಮೆರಾ ಇಟ್ಟ ವಿದ್ಯಾರ್ಥಿಗಳು ನಾಳೆ ಬಾಂಬ್ ಕೊಟ್ಟರು ಇಡುತ್ತಾರೆ. ಆದ್ದರಿಂದ ಈ ಬಗ್ಗೆ ಸಮರ್ಪಕ ತನಿಖೆಯಾಗಬೇಕು ಎಂದು ಶಾಸಕ ಯಶ್‌ಪಾಲ್ ಸುವರ್ಣ ಒತ್ತಾಯ ಮಾಡಿದರು.

### ನಾನು ಈ ಅವಧಿಯಲ್ಲಿ ಸಿಎಂ ರೇಸ್‌ನಲ್ಲಿ ಇಲ್ಲ, ಮುಂದಿನ ಅವಧಿಯಲ್ಲಿ ಇರುತ್ತೇನೆ: ಸತೀಶ್

» **ಬೆಂಗಳೂರು**

ಬಿ.ಕೆ.ಹರಿಪ್ರಸಾದ್ ಕೂಡ ಕೆಲವು ಕಡೆ ಸಿಎಂ ಮಾಡಿದ್ದಾರೆ. ಅವರು ಕಾಂಗ್ರೆಸ್ ಕುಟುಂಬದ ಸದಸ್ಯರು. ಅವರ ಹೇಳಿಕೆ ಕರ್ನಾಟಕಕ್ಕೆ ಸಂಬಂಧಪಟ್ಟಿಲ್ಲ. ಹರಿಪ್ರಸಾದ್ ಅವರ ಅನುಭವ ಹಂಚಿಕೊಂಡಿದ್ದಾರೆ. ಕೆಲವು ಸಮುದಾಯಗಳಿಗೆ ಅವಕಾಶ ಸಿಗಲಿಲ್ಲ. ಸಿಎಂ ಬದಲಾವಣೆ ಬಗ್ಗೆ ಗೊತ್ತಿಲ್ಲ, ಸಿಎಂ ಅಧಿಕಾರ ಹಂಚಿಕೆ ಬಗ್ಗೆ ನಮಗೆ ಮಾಹಿತಿ ಇಲ್ಲ. ಹೈಕಮಾಂಡ್‌ಗೆ ಬಿಟ್ಟಿದ್ದು, ನಮ್ಮ ಜೊತೆ ಯಾರೂ ಚರ್ಚೆ ಮಾಡಿಲ್ಲ. ಸಿದ್ದರಾಮಯ್ಯನವರು ಒಳ್ಳೆಯ ಕಾರ್ಯಕ್ರಮ ಕೊಟ್ಟಿದ್ದಾರೆ. ನಾನು ಈ ಅವಧಿಯಲ್ಲಿ ಸಿಎಂ ರೇಸ್ ನಲ್ಲಿ ಇಲ್ಲ. ಮುಂದಿನ ಅವಧಿಯಲ್ಲಿ ಇರುತ್ತೇನೆ ಎಂದರು.

### ಮಾತನಾಡುವ ನೆಪದಲ್ಲಿ ವೃದ್ದೆಯ ಕೊರಳಿನಲ್ಲಿದ್ದ ಒಂದು ಲಕ್ಷ ಮೌಲ್ಯ ಸರ ಅಪಹರಣ

» **ಚಳ್ಳಕೆರೆ**

ನಗರದ ಗಾಂಧಿನಗರದಲ್ಲಿರುವ ಮಹಾತ್ಮಗಾಂಧಿ ಶಾಲೆಯ ಬಳಿ ಲಕ್ಷ್ಮಮ್ಮ(70) ಎಂಬ ವೃದ್ದೆ ಮನೆಯ ಮುಂದೆ ಮಾತನಾಡುತ್ತಾ ಕುಳಿತಿರುವ ಸಂದರ್ಭದಲ್ಲಿ ನಡೆದುಬಂದ ವ್ಯಕ್ತಿಯೊಬ್ಬ ವೃದ್ದೆಯ ಕುತ್ತಿಗೆಗೆ ಕೈಹಾಕಿ ಬಂಗಾರದ ಸರವನ್ನು ಕಿತ್ತು ಪರಾರಿಯಾಗಿದ್ದಾನೆ. ಗುರುವಾರ ಮಧ್ಯಾಹ್ನ ಸುಮಾರು 12ರ ಸಮಯದಲ್ಲಿ ಈ ಘಟನೆ ನಡೆದಿದ್ದು, ಎಂದಿನಂತೆ ವೃದ್ದೆ ಲಕ್ಷ್ಮಮ್ಮ ತನ್ನ ಮನೆಯ ಮುಂದೆ ಮಾತನಾಡುತ್ತಾ ಕುಳಿತ ಸಂದರ್ಭದಲ್ಲಿ ಅಪರಿಚಿತ ವ್ಯಕ್ತಿಯೊಬ್ಬ ಏನನ್ನೋ ಕೇಳುವ ನೆಪದಲ್ಲಿ ಆಕೆಯೊಂದಿಗೆ ಮಾತನಾಡುವ ನಾಟವಾಡಿ ಕೊರಳಿನಲ್ಲಿದ್ದ 20ಗ್ರಾಂ ತೂಕದ ಸುಮಾರು ಒಂದು ಲಕ್ಷ ಬೆಲೆ ಬಾಳುವ ಸರವನ್ನು ಎಗರಿಸಿಕೊಂಡು ಹೋಗಿದ್ದಾನೆ. ಪಿಐಎಸ್ ಧರೆಪ್ಪ ಬಾಳಪ್ಪ ದೊಡ್ಡಮನಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಮಾದಪ್ಪನ ಹುಂಡಿಯಲ್ಲಿ ಕೋಟಿ ಕೋಟಿ ಹಣ ಜಮೆ

» **ಚಾಮರಾಜನಗರ**

ಶಕ್ತಿ ಯೋಜನೆ ಜಾರಿ ನಂತರ ಮಲೆಮಾದೇಶ್ವರ ಬೆಟ್ಟಕ್ಕೆ ಅಪಾರ ಸಂಖ್ಯೆಯಲ್ಲಿ ಮಹಿಳಾ ಭಕ್ತರು ಆಗಮಿಸಿದ್ದು, ಮಾದಪ್ಪನ ಹುಂಡಿಯಲ್ಲಿ ಕೋಟಿ ಕೋಟಿ ಹಣ ಜಮೆಯಾಗಿದೆ. 21 ದಿನಗಳಲ್ಲಿ ಕಾಣಿಕೆ ರೂಪದಲ್ಲಿ ಹುಂಡಿಯಲ್ಲಿ 1,56,38,122 ರೂ. ಹಣ ಸಂಗ್ರಹವಾಗಿದೆ.

# ಮಹಿಳೆಯರಿಗೆ ದೇಶದಲ್ಲಿ ನಡೆಯುತ್ತಿರುವ ದೌರ್ಜನ್ಯ ಖಂಡಿಸಿ ವಿವಿಧ ಸಂಘಟನೆಗಳಿಂದ ಪ್ರತಿಭಟನೆ

## ಹಿಂದೂ ಜಾಗರಣ ವೇದಿಕೆಯಿಂದ ಖಂಡನೆ



» **ಚಿತ್ರದುರ್ಗ**

ಉಡುಪಿಯ ನೇತ್ರ ಜ್ಯೋತಿ ಕಾಲೇಜಿನ ಮೂರು ವಿದ್ಯಾರ್ಥಿನಿಯರ ಮೇಲೆ ಸೂಕ್ತ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕೋರಿ ಚಿತ್ರದುರ್ಗ ಜಿಲ್ಲೆಯ ಹಿಂದು ಜಾಗರಣ ವೇದಿಕೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಉಡುಪಿಯ ನೇತ್ರಜೋತಿ ಕಾಲೇಜಿನ ಮುಸ್ಲಿಂ ವಿದ್ಯಾರ್ಥಿನಿಯರಾದ ಶಬನಾಜ್, ಅಲ್ಪಿಯಾ ಮತ್ತು ಅಲಿಮತ್ತುಲ್ ಶಾಫಿಯ ಈ ಮೂರು ವಿದ್ಯಾರ್ಥಿನಿಯರು ತಮ್ಮ ಸಹಪಾಠಿಗಳಾದ ಹಿಂದು ವಿದ್ಯಾರ್ಥಿನಿಯರು ಶೌಚಾಲಯ ಬಳಸುವಾಗ ವಿಡಿಯೋ ಮಾಡಿ ತಮ್ಮ ಕೋವಿನ ಹುಡುಗರೊಂದಿಗೆ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಈ ಮೂಲಕ ನಮ್ಮ ಹಿಂದು ಹೆಣ್ಣು ಮಕ್ಕಳನ್ನು ಜಿಹಾದಿನ ಬಲೆಗೆ ಬೀಳಿಸುವ ಯತ್ನ ಕಂಡುಬಂದಿದ್ದು, ಇಂತಹ ಆತಂಕಕಾರಿ ಘಟನೆಗಳನ್ನು ತಡೆಗಟ್ಟಲು ಆ ಮೂರು ಮುಸ್ಲಿಂ ವಿದ್ಯಾರ್ಥಿನಿಯರಿಗೆ ಕಾನೂನಾತ್ಮಕವಾಗಿ ಕಠಿಣ ಶಿಕ್ಷೆಯನ್ನು ವಿಧಿಸಬೇಕೆಂದು ಮನವಿ ಮಾಡಲಾಯಿತು.

ಈ ವಿಷಯವನ್ನು ಸೂಕ್ತವಾಗಿ ವಿಚಾರಣೆಗೆ ಒಳಪಡಿಸಿ ಇದರ ಹಿಂದಿರುವ ವ್ಯಕ್ತಿಗಳನ್ನು ಆದಷ್ಟು ಬೇಗ ಗುರುತಿಸಿ ಕಠಿಣ ಶಿಕ್ಷೆ ನೀಡಬೇಕಾಗಿ ತತ್ಸಬಂಧ ನಮ್ಮ ಜಿಲ್ಲೆಯಲ್ಲೂ ಕಾಲೇಜು ಹಾಸ್ಟೆಲ್‌ಗಳಲ್ಲಿ ಮೊಬೈಲ್ ಬಳಕೆ ಆ ರೀತಿ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಿ ಪರಿಶೀಲನೆ ನಡೆಸಬೇಕೆಂದು ಹಿಂದೂ ಜಾಗರಣ ವೇದಿಕೆ ಆಗ್ರಹಿಸುತ್ತದೆ.

## ಮಹಿಳೆ ರಕ್ಷಣೆ ಕೋರಿ ಪ್ರಧಾನಿಗೆ ಮನವಿ

» **ಚಿತ್ರದುರ್ಗ**

ಮಣಿಪುರದ ಮಹಿಳೆ ಬೆತ್ತಲೆ ಕೃತ್ಯದ ದೌರ್ಜನ್ಯ, ಉಡುಪಿಯಲ್ಲಿ ವೈದ್ಯಕೀಯ ವಿದ್ಯಾರ್ಥಿಗಳ ಶೌಚಾಲಯದ ವಿಡಿಯೋ ಮಾಡಿ ವೈರಲ್ ಮಾಡಿರುವ ಬಗ್ಗೆ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳದ ಸೌಜನ್ಯಳ ಪ್ರಕರಣಗಳಲ್ಲಿ ಮಹಿಳೆಯರಿಗೆ ಆಗಿರುವ ದೌರ್ಜನ್ಯವನ್ನು ಖಂಡಿಸಿ ಇಂದು ವಿವಿಧ ಮಹಿಳಾ ಸಂಘಟನೆಗಳು ಪ್ರತಿಭಟನೆಯನ್ನು ನಡೆಸಿ ಮಹಿಳೆಯರಿಗೆ ಸುರಕ್ಷತೆ ಹಾಗೂ ಗೌರವದಿಂದ ಬದುಕಲು ವ್ಯವಸ್ಥೆಯನ್ನು ಕಲ್ಪಿಸುವಂತೆ ಆಗ್ರಹಿಸಿ ಜಿಲ್ಲಾಡಳಿತದ ಮೂಲಕ ಪ್ರಧಾನ ಮಂತ್ರಿಗಳಿಗೆ ಮನವಿ ಮಾಡಿದರು.



ಮಣಿಪುರದಲ್ಲಿನ ಎರಡು ಕೋಮಿನ ದ್ವೇಷದ ಗಲಭೆ ಮತ್ತು ಮಹಿಳೆಯ ಮೇಲಿನ ಬೆತ್ತಲೆ ಮೆರವಣಿಗೆ ಮತ್ತು ಅತ್ಯಾಚಾರ ನಡೆದಿದ್ದು ಇದು ದೇಶದ ಮಹಿಳೆಯರು ತಲೆ ತಗ್ಗಿಸುವಂತಾಗಿದೆ. ಮಣಿಪುರದ ಕುಕಿ ಜನಾಂಗದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ನಡುಬೀದಿಯಲ್ಲಿ ಮೆರವಣಿಗೆ ಮಾಡಿ ನಾನಾ ರೀತಿ ಚಿತ್ರಹಿಂಸೆ ನೀಡುತ್ತಾ ಅವರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ಕೊಲೆ ಮಾಡಿದ ಘಟನೆಯಲ್ಲಿ ಇಡಿ ದೇಶವೆ ತಲೆತಗ್ಗಿಸುವಂತಹ ಅಮಾನುಷ ಕೃತ್ಯವಾಗಿದೆ

ಉಡುಪಿಯ ನೇತ್ರ ಜ್ಯೋತಿ ಕಾಲೇಜಿನಲ್ಲಿ ಹಿಂದೂ ಯುವತಿಯರುಶೌಚಾಲಯವನ್ನು ಬಳಸುವ ವೀಡಿಯೋವನ್ನು ಮುಸ್ಲಿಂ ಯುವತಿಯರು ಮಾಡಿದ್ದು, ಈಗಾಗಲೇ ಮಾಧ್ಯಮಗಳಲ್ಲಿ ಬಂದಂತೆ ತಮಾಷೆಗಾಗಿ ಶೌಚಾಲಯದಲ್ಲಿ ವಿಡಿಯೋ ಚಿತ್ರೀಕರಣ ಮಾಡಿದ್ದೇವೆ ಎಂಬುದು ತೀರ ಬಾಲಿಷ ಹಾಗೂ ಪ್ರಕರಣವನ್ನು ದಾರಿ ತಪ್ಪಿಸುವ ಹೇಳಿಕೆ ಶೌಚ ಕ್ರಿಯೆ ಮಾಡುವಂತ ಖಾಸಗಿ ಜಾಗದಲ್ಲಿ ವಿಡಿಯೋ ಚಿತ್ರೀಕರಣ ಮಾಡುವಂತ ಹೇಯ ಕೃತ್ಯದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಒಳಗಾಗದೆ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಕ್ರಮ ತೆಗೆದುಕೊಂಡು ಇದರ ಹಿಂದಿರುವಂತ ಷಡ್ಯಂತ್ರವನ್ನು ಬಯಲಿಗೆಳೆಯಬೇಕು. ಈ ಕುರಿತು ಜಿಲ್ಲಾಡಳಿತ ಸೂಕ್ತ ರೀತಿಯ ತನಿಖೆಯನ್ನು ನಡೆಸಿ ತಪ್ಪಿತಸ್ಥರ ಮೇಲೆ ಕಾನೂನಾತ್ಮಕ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಆಗ್ರಹಿಸಿದೆ.

ಧರ್ಮಸ್ಥಳದ ಸೌರ್ಜನ್ಯಳ ವಿರುದ್ಧ ಹನ್ನೊಂದು ವರ್ಷಗಳ ಹಿಂದೆ ನಡೆದಂತಹ ಅನ್ಯಾಯ ಇದಕ್ಕೆ ನಿರಪರಾಧಿಗಳಿಗೆ ಶಿಕ್ಷೆಯಾಗಿರುವುದು ಶೋಚನೀಯವಾಗಿದೆ.

# ನಗರದ ಪೀರಲ ದೇವರ ದೇವಸ್ಥಾನದಲ್ಲಿ ಮೊಹರಂ ಹಬ್ಬಕ್ಕೆ ಸಡಗರದ ಸಿದ್ದತೆ

» **ಚಳ್ಳಕೆರೆ**

29ರಂದು ನಡೆಯುವ ಮೊಹರಂ ಹಬ್ಬಕ್ಕೆ ಬರದ ಸಿದ್ದತೆಗಳು ನಡೆಯುತ್ತಿವೆ. ನಗರದ ಬಳ್ಳಾರಿ ರಸ್ತೆಯ ಪೀರಲ ದೇವರ ದೇವಸ್ಥಾನದ ಆವರಣದಲ್ಲಿ ಈಗಾಗಲೇ ಮೊಹರಂ ಹಬ್ಬದ ಪ್ರಯುಕ್ತ ವಿಶೇಷವಾಗಿ ಹರಿಕೆ ಹೊತ್ತು ಭಕ್ತರು ಕೆಂಡ ತುಳಿಯುವ ಕಾರ್ಯಕ್ರಮವಿದ್ದು ದೇವಸ್ಥಾನದ ಸಮಿತಿ ಈ ಹಿನ್ನೆಲೆಯಲ್ಲಿ ಬರದಿಂದ ಸಿದ್ದತೆ ಕೈಗೊಂಡಿದೆ.

ಪ್ರಸ್ತುತ ಆಡಳಿತ ಮಂಡಳಿಯ ಹಿರಿಯ ಸದಸ್ಯರಾದ ತಿಪ್ಪೇಸ್ವಾಮಿ, ರುದ್ರಪ್ಪ, ಪೂಜಾರಿ ಸುಭಾನ್‌ಸಾಬ್, ಕಾರೇರ ರಮೇಶ್, ಸುಧಾಕರ್, ಬಸಣ್ಣ ಮುಂತಾದವರು ಮಾಹಿತಿ ನೀಡಿ, ಗುರುವಾರದಿಂದ ಮೊಹರಂ ಹಬ್ಬ ವಿದ್ಯುಕ್ತವಾಗಿ ಪ್ರಾರಂಭವಾಗಿದ್ದು ಮೊದಲನೇ ಹಂತದಲ್ಲಿ ಸಣ್ಣಕೆಂಡ, ಎರಡನೇ ಹಂತದ ಶನಿವಾರ ವಿಶೇಷವಾಗಿ ಕೆಂಡತುಳಿಯುವ ಕಾರ್ಯಕ್ರಮವಿರುತ್ತದೆ. ಶ್ರೀಸ್ವಾಮಿಯನ್ನು ಮೆರವಣಿಗೆಯಿಂದ ಪಾದಗಟ್ಟೆಯಿಂದ ಕರೆತಂದು ಪೀರಲದೇವರ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಿ ಪೂಜಾ ವಿಧಿವಿಧಾನಗಳನ್ನು ನಡೆಸಲಾಗುವುದು. ದೇವಸ್ಥಾನಕ್ಕೆ ಬರುವ ಭಕ್ತರಿಗೆ ದೇವರಿಗೆ ಸಕ್ಕರೆ, ಬೆಲ್ಲ, ಮಂಡಕ್ಕಿ, ಕಡ್ಲೆ ಮುಂತಾದ



ಪದಾರ್ಥಗಳನ್ನು ನೈವೈದ್ಯ ಮಾಡಿ ಭಕ್ತರಿಗೆ ಪ್ರಸಾದರ ರೂಪದಲ್ಲಿ ನೀಡಲಾಗುತ್ತದೆ.

ಮೊಹರಂ ಹಬ್ಬ ಆಚರಣೆ ಹಿನ್ನೆಲೆಯಲ್ಲಿ ಪೀರಲ ದೇವರ ಸುತ್ತಮುತ್ತಲ ಪ್ರದೇಶವನ್ನು ಬಣ್ಣ, ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ, ದೇವಸ್ಥಾನಕ್ಕೆ ಬರುವ ಭಕ್ತರ ಅನುಕೂಲಕ್ಕಾಗಿ ಅಲ್ಲಿರುವ ಕೆಲ ಅಂಗಡಿಗಳನ್ನು ತಾತ್ಕಾಲಿಕವಾಗಿ ತೆರವುಗೊಳಿಸಿ ವಿಶಾಲಾದವಾದ ವ್ಯವಸ್ಥೆ ಮಾಡಲಾಗಿದೆ.

ಭಕ್ತರು ಬಂದು ದೇವರ ದರ್ಶನ ಪಡೆಯಲು ಎರಡೂ ಕಡೆಯಿಂದ ಸರಥಿ ಸಾಲಿನ ವ್ಯವಸ್ಥೆ ಮಾಡಲಾಗಿದೆ.

**ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ**

# ಶಾಲಾ, ಅಂಗನವಾಡಿ ಕಟ್ಟಡ ದುರಸ್ತಿಕೈಗೊಳ್ಳಿ



» **ಚಿತ್ರದುರ್ಗ**

ಜಿಲ್ಲೆಯಲ್ಲಿ ಮಳೆಯ ಪ್ರಮಾಣ ಹೆಚ್ಚಾಗುತ್ತಿದೆ. ಮುಂಜಾಗ್ರತಾ ಕ್ರಮವಾಗಿ ಸರ್ಕಾರಿ ಶಾಲೆ ಹಾಗೂ ಅಂಗನವಾಡಿ ಕಟ್ಟಡಗಳ ತುರ್ತು ದುರಸ್ತಿ ಕಾರ್ಯ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಸೂಚನೆ ನೀಡಿದರು.ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣೆ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆಯಾ ತಾಲೂಕುಗಳ ತಹಶೀಲ್ದಾರರು, ಮಳೆಯ ಸ್ಥಿತಿ ನೋಡಿಕೊಂಡು ಪರಿಹಾರ ಕಾರ್ಯಗಳನ್ನು ಸಮರ್ಥವಾಗಿ ಕೈಗೊಳ್ಳಬೇಕು. ಹಳೆಯ ಹಾಗೂ ದುಸ್ಥಿತಿಯಲ್ಲಿರುವ ಶಾಲಾ ಕಟ್ಟಡಗಳ ಮಾಹಿತಿ ಪಡೆದುಕೊಂಡು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಮನೆ, ಜಾನುವಾರು, ಬೆಳೆ ಹಾಗೂ ಪ್ರಾಣಹಾನಿಯಾಗದಂತೆ ತಡೆಯಲು ಪ್ರಯತ್ನಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಡಿಡಿಪಿಐ ರವಿಶಂಕರ್ ರೆಡ್ಡಿ, ಡಿಡಿಪಿಯು ಎನ್.ರಾಜು, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

**ಎಐಸಿಸಿ ಅಧ್ಯಕ್ಷರನ್ನು ಭೇಟಿಯಾದ ಶಾಸಕ ಟಿ.ರಘುಮೂರ್ತಿ**

# ಕ್ಷೇತ್ರ ಅಭಿವೃದ್ದಿಗೆ ಹೆಚ್ಚಿನ ಅನುದಾನ ಬೇಡಿಕೆ

» **ಚಳ್ಳಕೆರೆ**

ಕರ್ನಾಟಕ ರಾಜ್ಯದಲ್ಲಿ ಯಾರೂ ಊಹಿಸದ ಫಲಿತಾಂಶ ನಮಗೆ ಬಂದಿದೆ. ರಾಜ್ಯದ ಮತದಾರ ಕಾಂಗ್ರೆಸ್ ಪಕ್ಷದ ಮೇಲೆ ಅಪಾರವಾದ ಗೌರವವಿಟ್ಟಿದ್ದಾನೆ ಎಂಬುವುದಕ್ಕೆ ವಿಧಾನಸಭಾ ಚುನಾವಣೆಯೇ ಸಾಕ್ಷಿ. ಕಾಂಗ್ರೆಸ್ ಪಕ್ಷದ ಗೆಲುವಿಗೆ ಎಲ್ಲರೂ ಎಲ್ಲಾ ರೀತಿ ಸಹಕಾರ ನೀಡಿದ್ದಾರೆ. ಇದೇ ಉತ್ಸಾಹದಿಂದ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಯಷ್ಟೇಯಲ್ಲ, ಭಾರತದಲ್ಲಿ ಕಾಂಗ್ರೆಸ್ ಪಕ್ಷ ಅತಿ ಹೆಚ್ಚಿನ ಸ್ಥಾನಗಳನ್ನು ಪಡೆದು ಕೇಂದ್ರದಲ್ಲಿ ಆಡಳಿತ ನಡೆಸುವ ದಿನಗಳು ದೂರವಿಲ್ಲವೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.

ಅವರು, ನವದೆಹಲಿಯ ಪಕ್ಷದ ಕಾರ್ಯಾಲಯದಲ್ಲಿ ತಮ್ಮನ್ನು ಭೇಟಿ ಮಾಡಿದ ಚಳ್ಳಕೆರೆ ಕ್ಷೇತ್ರದ ಟಿ.ರಘುಮೂರ್ತಿ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳೆ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರೊಡನೆ ಸೌಹಾರ್ಥಿತವಾಗಿ ಮಾತನಾಡಿದರು. ಕೇಂದ್ರದಲ್ಲಿ ಆಡಳಿತ ನಡೆಸುತ್ತಿರುವ ಎನ್‌ಡಿಎ ನೇತೃತ್ವದ ಸರ್ಕಾರದ ಪ್ರಧಾನಮಂತ್ರಿ ನರೇಂದ್ರಮೋದಿ ವೈಫಲ್ಯಗಳ ಹಾದಿಯಲ್ಲಿ ಸಿಲುಕಿದ್ದು ಇದು ಕಾಂಗ್ರೆಸ್ ಪಕ್ಷದ ನೇತೃತ್ವದ ಯುಪಿಎ ಆಡಳಿತಕ್ಕೆ ದಿಕ್ಸೂಚಿಯಾಗಲಿದೆ ಎಂದರು.



ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳೆ ಮಾತನಾಡಿ, ರಾಜ್ಯದ ಮತದಾರರಿಗೆ ನೀಡಿದ ಭರವಸೆಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಐದು ಭರವಸೆಗಳ ಈಡೇರಿಕೆಯ ಬಗ್ಗೆ ಚಿಂತನೆ ನಡೆಸಿ ಅವುಗಳನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದ್ದಾರೆ. ರಾಜ್ಯದಲ್ಲೂ ಸಹ 20ಕ್ಕೂ ಹೆಚ್ಚು ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುವ ನಿಟ್ಟಿನಲ್ಲಿ ಸಿದ್ದತೆಗಳು ನಡೆದಿವೆ ಎಂದರು. ಕ್ಷೇತ್ರದ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಹೆಚ್ಚಾಗಿರುವ ಕ್ಷೇತ್ರವಾಗಿದೆ. ಈ ನಿಟ್ಟಿನಲ್ಲಿ ಹೆಚ್ಚಿನ ಆರ್ಥಿಕ ನೆರವನ್ನು ಕ್ಷೇತ್ರದ ಅಭಿವೃದ್ದಿಗೆ ನಿರೀಕ್ಷೆ ಮಾಡಲಾಗುತ್ತಿದೆ. ಹ್ಯಾಟ್ರಿಕ್ ಗೆಲುವಿಗೆ ಕಾರಣಕರ್ತರಾದ ಕ್ಷೇತ್ರದ ಮತದಾರರಿಗೆ ಹೆಚ್ಚಿನ ಸೌಲಭ್ಯ ನೀಡಿ ಅವರ ಋಣವನ್ನು ತೀರಿಸಬೇಕಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಲಾಗುವುದು.ತಾವುಸಹಮುಖ್ಯಮಂತ್ರಿಗಳಿಗೆ ಹೆಚ್ಚಿನ ಅನುದಾನ ನೀಡುವ ಬಗ್ಗೆ ಸೂಚನೆ ನೀಡುವಂತೆ ಮನವಿ ಮಾಡಿದರು.

# ಪ್ರಮುಖ ಕಂಪನಿಗಳಿಗೆ ಬಂಡವಾಳ ಹೂಡಿಕೆಗೆ ಆಹ್ವಾನ ನೀಡಿದ ಮೋದಿ

» **ಗಾಂಧಿನಗರ**

ದೇಶದಲ್ಲಿ ಬಂಡವಾಳ ಹೂಡಿಕೆ ಮಾಡುವಂತೆ ಜಗತ್ತಿನ ಪ್ರಮುಖ ಕಂಪನಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಕರೆ ನೀಡಿದ್ದಾರೆ.

ಸಾಫ್ಟ್‌ವೇರ್ ಅನ್ನು ಅಪ್‌ಡೇಟ್ ಮಾಡುವುದು ಅಗತ್ಯವಾಗಿರುವುದರಿಂದ ಈ ಪ್ರೋಗ್ರಾಂ ಕೂಡ ಆಗಿದೆ. ಮೇಕ್ ಇನ್ ಇಂಡಿಯಾ ಅಡಿಯಲ್ಲಿ ಭಾರತದಲ್ಲಿ ವಿದೇಶಿ ಕಂಪನಿಗಳು ಹೂಡಿಕೆ ಮಾಡಲು ಬನ್ನಿ ಎಲ್ಲಾ ಸೌಲಭ್ಯ ಒದಗಿಸಲಾಗುವುದು ಎಂದಿದ್ದಾರೆ. ಗುಜರಾತ್‌ನ ಗಾಂಧಿನಗರದಲ್ಲಿ ನಡೆದ 'ಸೆಮಿಕಾನ್ ಇಂಡಿಯಾ ಕಾನ್ಫರೆನ್ಸ್ 2023' ಉದ್ಘಾಟಿಸಿ ಮಾತನಾಡಿದ ಅವರು ಭಾರತ ಯಾರನ್ನೂ ನಿರಾಶೆಗೊಳಿಸುವುದಿಲ್ಲ 21ನೇ ಶತಮಾನದ ಭಾರತದಲ್ಲಿ ಅವಕಾಶಗಳು ಅವಕಾಶಗಳಾಗಿವೆ. ಇದರಲ್ಲಿ, ನಿಮ್ಮ ವ್ಯಾಪಾರವು ಎರಡು ಅಥವಾ ಮೂರು ಪಟ್ಟು ಹೆಚ್ಚಾಗುತ್ತದೆ ಹೂಡಿಕೆ ಮಾಡಿ ಎಂದಿದ್ದಾರೆ 2014 ರಲ್ಲಿ, ಭಾರತದ ಎಲೆಕ್ಟ್ರಾನಿಕ್ಸ್ ಉತ್ಪಾದನೆಯು 30 ಶತಕೋಟಿ ಡಾಲರ್‌ಗಿಂತ ಕಡಿಮೆಯಿತ್ತು, ಅದು 100 ಶತಕೋಟಿ ಡಾಲರ್‌ಗಿಂತ ಹೆಚ್ಚಾಗಿದೆ. ಎರಡು ವರ್ಷಗಳಲ್ಲಿ ಎಲೆಕ್ಟ್ರಾನಿಕ್ಸ್ ರಫ್ತು ಕೂಡ ದ್ವಿಗುಣಗೊಂಡಿದೆ. ಮೊಬೈಲ್ ಫೋನ್ ರಫ್ತು ಕೂಡ ದ್ವಿಗುಣಗೊಂಡಿದೆ ಎಂದಿದ್ದಾರೆ.

ಭಾರತ ಮೊಬೈಲ್‌ಗಳನ್ನು ಆಮದು ಮಾಡಿಕೊಳ್ಳುತ್ತಿತ್ತು, ಅದು ಈಗ ರಫ್ತು ಮಾಡುತ್ತಿದೆ. 2014ರಲ್ಲಿ 60 ಮಿಲಿಯನ್ ಬ್ರಾಡ್ ಬ್ಯಾಂಡ್ ಬಳಕೆದಾರರಿದ್ದು, ಇಂದು ಅದು 800 ಮಿಲಿಯನ್ ಗಿಂತಲೂ ಹೆಚ್ಚಿದೆ. ಈ ಅಂಕಿಅಂಶಗಳು ಬೆಳೆಯುತ್ತಿರುವ ವ್ಯಾಪಾರವನ್ನು ತೋರಿಸುತ್ತವೆ. ಭಾರತದ ಜನರು ತಂತ್ರಜ್ಞಾನವನ್ನು ವೇಗವಾಗಿ ಅಳವಡಿಸಿಕೊಳ್ಳುತ್ತಿದ್ದಾರೆ ಎಂದಿದ್ದಾರೆಸೆಮಿಕಂಡಕ್ಟರ್ ಕೇವಲ ನಮ್ಮ ಅಗತ್ಯವಲ್ಲ. ಆದರೆ ಜಗತ್ತಿಗೆ ಅದು ಬೇಕು. ಜಗತ್ತಿಗೆ ವಿಶ್ವಾಸಾರ್ಹ ಪೂರೈಕೆದಾರರ ಅಗತ್ಯವಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T